# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ –02 ಸಂಚಿಕೆ – 198 | ಆರ್‌ಎನ್‌ಐ ನಂ: ಕೆಎಆರ್‌ಕೆಎಎನ್/2023/88462 | ಕೆಎ/ಎಸ್‌ಕೆ/ಸಿಟಿಎ–874/2024–2026 | ಚಿತ್ರದುರ್ಗ | ದಿನಾಂಕ: 26–02–2025 ಬುಧವಾರ | ಪುಟ: 4 | ಬೆಲೆ : ರೂ.2–00

Volume - 02 Issue - 198 | RNI No: KARKAN/2023/88462 | KA/SK/CTA-874/2024-2026 | Chitradurga | Date: 26-02-2025 Wednesday | Page: 4 | Price: Rs. 2-00



ಒಳಪುಟದ ಸುದ್ದಿಗಳು

ಪುರಸಭೆಗೆ ಗೌರವ ತರುವ ಕೆಲಸ ಮಾಡಿ, ಇಲ್ಲದಿದ್ದರೆ ಜಾಗ ಖಾಲಿ ಮಾಡಿ 2

ಚಿತ್ರದುರ್ಗ: ರೂ.78.42 ಲಕ್ಷ ವೆಚ್ಚದ ಅಭಿವೃದ್ಧಿ ಕಾಮಗಾರಿಗಳಿಗೆ ಭೂಮಿಪೂಜೆ 3

ಚಿತ್ರದುರ್ಗದವರನ್ನೇ ಎಂಎಲ್‌ಸಿ ಮಾಡಲು ತಮ್ಮ ಸಹಕಾರ ಅತ್ಯಗತ್ಯವಾಗಿ ಬೇಕು 4



ಸುದ್ದಿ, ಜಾಹಿರಾತಿಗೆ 9686622252


## ಫಾಸ್ಟ್ ನ್ಯೂಸ್

### ಉದ್ಯೋಗ ಮೇಳ: ನೋಂದಣಿಗೆ ಸೂಚನೆ

■ ಚಿತ್ರದುರ್ಗ

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಕೌಶಲ್ಯಾಭಿವೃದ್ಧಿ ಇಲಾಖೆ ಹಾಗೂ ಡಿಡಿಯುಜಿಕೆವೈ, ಜಿಲ್ಲಾ ಗ್ಯಾರಂಟಿ ಅನುಷ್ಠಾನ ಪ್ರಾಧಿಕಾರದವತಿಯಿಂದ ಮುಂಬರುವ ಮಾರ್ಚ್ 01ರಂದು ಬೆಳಿಗ್ಗೆ 9ಕ್ಕೆ ಚಿತ್ರದುರ್ಗ ನಗರದ ಸರ್ಕಾರಿ ವಿಜ್ಞಾನ ಕಾಲೇಜು ಆವರಣದಲ್ಲಿ ಉದ್ಯೋಗ ಮೇಳ ಆಯೋಜಿಲಾಗಿದ್ದು, ಉದ್ಯೋಗ ಮೇಳದಲ್ಲಿ ಭಾಗವಹಿಸಲು ಇಚ್ಛಿಸುವ ಅಭ್ಯರ್ಥಿಗಳು ಕೂಡಲೆ ನೊಂದಣಿ ಮಾಡಿಕೊಳ್ಳುವಂತೆ ಸೂಚನೆ ನೀಡಲಾಗಿದೆ. ಉದ್ಯೋಗ ಮೇಳದಲ್ಲಿ ರಾಜ್ಯದ ಪ್ರತಿಷ್ಠಿತ ಕಂಪನಿಗಳು ಉದ್ಯೋಗ ನೀಡುವ ಸಲುವಾಗಿ ಭಾಗವಹಿಸಲಿವೆ. 18 ರಿಂದ 35 ವರ್ಷದ ವಯೋಮಿತಿಯ, ವಿವಿಧ ವಿದ್ಯಾರ್ಹತೆಗಳನ್ನು ಹೊಂದಿರುವ ನಿರುದ್ಯೋಗ ಯುವಕ–ಯುವತಿಯರು ಕಡ್ಡಾಯವಾಗಿ ನೊಂದಣಿ ಮಾಡಿಕೊಂಡು, ಉದ್ಯೋಗ ಮೇಳದಲ್ಲಿ ಭಾಗವಹಿಸ ಬಹುದಾಗಿದೆ. **ಗೂಗಲ್ ಫಾರ್ಮ್ ಲಿಂಕ್:** https://forms.gle/7pTxbGPVKAFCSYaX7 ಹಾಗೂ ಕ್ಯೂಆರ್ ಕೋಡ್ ಸ್ಕ್ಯಾನ್ ಮಾಡುವ ಮೂಲಕ ನೊಂದಣಿ ಮಾಡಿಸಿ ಕೊಂಡು ಉದ್ಯೋಗ ಮೇಳದಲ್ಲಿ ಭಾಗವಹಿಸಬಹುದು ಎಂದು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ವೀರಭದ್ರೇಶ್ವರ ಗುಗ್ಗುಳೋತ್ಸವ

» ಚಿತ್ರದುರ್ಗ

ಚಿತ್ರದುರ್ಗ ತಾಲ್ಲೂಕು, ಜಾಲಿಕಟ್ಟೆ ಗ್ರಾಮದಲ್ಲಿ ಮಹಾಶಿವರಾತ್ರಿ ಹಬ್ಬದ ಪ್ರಯುಕ್ತ ಶ್ರೀ ಮಣಿಕಂಠ ಯುವಕರ ಸೇವಾ ಸಂಘ (ರಿ.) ಶ್ರೀ ವಿನಾಯಕ ಗೆಳೆಯರ ಬಳಗ ಮತ್ತು ಗ್ರಾಮಸ್ಥರಿಂದ 11ನೇ ವರ್ಷದ ಶ್ರೀ ವೀರಭದ್ರೇಶ್ವರ ಗುಗ್ಗುಳೋತ್ಸವ ಹಾಗೂ ಕೆಂಡಾರ್ಚನೆ ಕಾರ್ಯಕ್ರಮವೂ ಫೆ. 27 ರಂದು ನಡೆಯಲಿದೆ ಎಂದು ಅಖಿಲ ಭಾರತ ವೀರಶೈವ ಲಿಂಗಾಯಿತ ಮಹಾಸಭಾ ಜಿಲ್ಲಾ ಘಟಕದ ಕೋಶಾಧ್ಯಕ್ಷರಾದ ಸಿ.ರುದ್ರಪ್ಪ ಜಾಲಿಕಟ್ಟೆ ತಿಳಿಸಿದ್ದಾರೆ. ಫೆ. 27ರ ಗುರುವಾರ ಬೆಳಿಗ್ಗೆ 5.00 ಗಂಟೆಗೆ "ಶ್ರೀ ಈಶ್ವರ, ಶ್ರೀ ವೀರಭದ್ರೇಶ್ವರ, ಶ್ರೀ ಆಂಜನೇಯಸ್ವಾಮಿ ಅಭಿಷೇಕ" ಬೆಳಿಗ್ಗೆ 6.ರಿಂದ ಹೊಳಲ್ಕೆರೆ ತಾಲ್ಲೂಕು, ಕಡೂರು, ಕಲಾತಂಡದವರಿಂದ 'ವೀರಗಾಸೆ' ಇವರಿಂದ ಗ್ರಾಮದ ಮುಖ್ಯ ರಸ್ತೆಗಳಲ್ಲಿ ಶ್ರೀ ವೀರಭದ್ರೇಶ್ವರ ಗುಗ್ಗುಳೋತ್ಸವ ನಡೆಯಲಿದ್ದು, ಮಧ್ಯಾಹ್ನ 12 ಗಂಟೆಗೆ ಶ್ರೀ ಈಶ್ವರ ದೇವಸ್ಥಾನದ ಹತ್ತಿರ "ಕೆಂಡಾರ್ಚನೆ" ನಂತರ 1.00 ಗಂಟೆಯಿಂದ "ಪ್ರಸಾದವಿನಿಯೋಗ" ಕಾರ್ಯಕ್ರಮನಡೆಯಲಿದೆ. ಗ್ರಾಮದ ಮತ್ತು ಸುತ್ತಮುತ್ತಲಿನ ಗ್ರಾಮಸ್ಥರು ಸಕಲ ಬಂಧುಗಳು, ಭಕ್ತರು ಆಗಮಿಸಿ ಸ್ವಾಮಿಯ ಕೃಪೆಗೆ ಪಾತ್ರರಾಗಬೇಕೆಂದು ಕೋರಿದ್ದಾರೆ.

### ಮುರುಘರಾಜೇಂದ್ರ ವೃತ್ತದ ನಾಮಫಲಕ ಉದ್ಘಾಟನೆ ಇಂದು

» ಚಿತ್ರದುರ್ಗ

ನಗರದ ಹೊಳಲ್ಕೆರೆ ರಸ್ತೆಯ ಶ್ರೀ ನೀಲಕಂಠೇಶ್ವರಸ್ವಾಮಿ ದೇವಸ್ಥಾನದಲ್ಲಿನ ವೀರಶೈವ ಸಮಾಜ (ರಿ.)ದವತಿಯಿಂದ ದಾವಣಗೆರೆ ರಸ್ತೆಯ ಜೆ.ಎಂ.ಐ.ಟಿ. ವೃತ್ತದಲ್ಲಿ ಶ್ರೀ ಜಗದ್ಗುರು ಮುರುಘರಾಜೇಂದ್ರ ವೃತ್ತದ ನಾಮಫಲಕ ಉದ್ಘಾಟನಾ ಸಮಾರಂಭವು ಫೆ. 26 ರ ಮಧ್ಯಾಹ್ನ 11.30ಕ್ಕೆ ನಡೆಯಲಿದೆ. ಕಾರ್ಯಕ್ರಮದ ಸಾನಿಧ್ಯವನ್ನು ದಾವಣಗೆರೆಯ ವಿರಕ್ತಮಠದ ಡಾ. ಬಸವಪ್ರಭು ಸ್ವಾಮೀಜಿ ಹಾಗೂ ಶ್ರೀ ಜಗದ್ಗುರು ಮುರುಘರಾಜೇಂದ್ರ ವಿದ್ಯಾಪೀಠ ಹಾಗೂ ಆಡಳಿತ ಮಂಡಳಿಯ ಸದಸ್ಯರಾದ ಡಾ. ಬಸವಕುಮಾರ ಸ್ವಾಮೀಜಿ ವಹಿಸಲಿದ್ದಾರೆ. ಜಗದ್ಗುರು ಮುರುಘರಾಜೇಂದ್ರ ವೃತ್ತದ ನಾಮಫಲಕ ಉದ್ಘಾಟನೆಯನ್ನು ಶಾಸಕರಾದ ಕೆ.ಸಿ.ವೀರೇಂದ್ರ ಪಪ್ಪಿ ನಡೆಸಲಿದ್ದು, ಅಧ್ಯಕ್ಷತೆಯನ್ನು ವೀರಶೈವ ಸಮಾಜದ ಅಧ್ಯಕ್ಷರಾದ ಎಚ್.ಎನ್. ತಿಪ್ಪೇಸ್ವಾಮಿ ವಹಿಸಲಿದ್ದಾರೆ. ಮುಖ್ಯ ಅತಿಥಿಗಳಾಗಿ ವಿಧಾನ ಪರಿಷತ್ ಸದಸ್ಯರಾದ ಕೆ.ಎಸ್. ನವೀನ್, ವೀರಶೈವ ಸಮಾಜದ ಉಪಾಧ್ಯಕ್ಷರಾದ ಕೆ.ಸಿ.ನಾಗರಾಜ್, ನಗರಸಭಾ ಸದಸ್ಯರಾದ ಕೆ.ಬಿ. ಸುರೇಶ್ ಭಾಗವಹಿಸಲಿದ್ದಾರೆ.

### ದಿಶಾ ಸಭೆಯಲ್ಲಿ ಸಂಸದರಾದ ಗೋವಿಂದ ಎಂ.ಕಾರಜೋಳ ಸೂಚನೆ

# ಶಾಲಾ ಕೊಠಡಿ ದುರಸ್ತಿಗೆ 3 ತಿಂಗಳ ಗಡುವು

» ಚಿತ್ರದುರ್ಗ





ಜಿಲ್ಲೆಯ ಸರ್ಕಾರಿ ಪ್ರಾಥಮಿಕ ಹಾಗೂ ಪ್ರೌಢಶಾಲೆಗಳ ಶಾಲಾ ಕೊಠಡಿಗಳ ದುರಸ್ತಿ ಕಾರ್ಯವನ್ನು ಮೂರು ತಿಂಗಳೊಳಗೆ ಪೂರ್ಣಗೊಳಿಸಬೇಕು ಎಂದು ಸಂಸದರಾದ ಗೋವಿಂದ ಎಂ.ಕಾರಜೋಳ ಸೂಚನೆ ನೀಡಿದರು.

ನಗರದ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಬುಧವಾರ ನಡೆದ ಕೇಂದ್ರ ಪುರಸ್ಕೃತ ಯೋಜನೆಗಳ ಜಿಲ್ಲಾ ಅಭಿವೃದ್ಧಿ ಸಮನ್ವಯ ಮತ್ತು ಉಸ್ತುವಾರಿ ಸಮಿತಿ (ದಿಶಾ) ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಜಿಲ್ಲೆಯ ವಿವಿಧೆಡೆ ಬಹುತೇಕ ಸರ್ಕಾರಿ ಶಾಲಾ ಕೊಠಡಿಗಳು ಶಿಥಿಲಾವ್ಯಸ್ಥೆಯಲ್ಲಿರುವುದನ್ನು ಗಮನಿಸಿದ್ದೇನೆ. ಸರ್ಕಾರಿ ಶಾಲೆಗಳಿಗೆ ಕಡು ಬಡುವರ ಮಕ್ಕಳು ಬರುತ್ತಾರೆ. ಶಾಲಾ ಕೊಠಡಿಗಳ ದುರಸ್ತಿಗಾಗಿ ಕೆವಿಂಇಆರ್‌ಸಿ, ಡಿಎಂಎಫ್ ಅನುದಾನ ಸೇರಿದಂತೆ ಜಿಲ್ಲೆಗೆ 3,700 ಕೋಟಿ ಅನುದಾನ ದೊರೆತಿದೆ. ಆದಾಗ್ಯೂ ಶಾಲೆಗಳ ಅಭಿವೃದ್ಧಿ ಕಾಮಗಾರಿಗಳು ಆಗುತ್ತಿಲ್ಲ. ಇದಕ್ಕೆ ನಿಮ್ಮ ವೈಫಲ್ಯವೇ ಕಾರಣ ಎಂದು ಶಾಲಾ ಶಿಕ್ಷಣ ಇಲಾಖೆ ಉಪನಿರ್ದೇಶಕ ಮಂಜುನಾಥ ಅವರ ವಿರುದ್ಧ ತೀವ್ರ ಅಸಮಾಧಾನ ವ್ಯಕ್ತಪಡಿಸಿದ ಅವರು, ಜಿಲ್ಲೆಯ ಶಾಲಾ–ಕಾಲೇಜು, ವಿದ್ಯಾರ್ಥಿನಿಲಯ, ಆಸ್ಪತ್ರೆ ಹಾಗೂ ಅಂಗನವಾಡಿ ಕೇಂದ್ರಗಳ ಕಟ್ಟಡ ಕಾಮಗಾರಿಗಳನ್ನು ಸುಸಜ್ಜಿತವಾಗಿ ಹಾಗೂ ಅತ್ಯಾಧುನಿಕವಾಗಿ ನಿರ್ಮಿಸಬೇಕು. ಈ ನಿಟ್ಟಿನಲ್ಲಿ ಮೂರು ತಿಂಗಳೊಳಗೆ ತ್ವರಿತವಾಗಿ ಅಭಿವೃದ್ಧಿ ಕಾರ್ಯಗಳನ್ನು ಪೂರ್ಣಗೊಳಿಸಬೇಕು. ಜಿಲ್ಲೆಯಲ್ಲಿ ಒಟ್ಟು 609 ಸರ್ಕಾರಿ ಪ್ರಾಥಮಿಕ ಶಾಲೆಗಳು ಇದ್ದು, ಈ ಪೈಕಿ ಆರ್‌ಸಿಸಿ ಮೇಲ್ಛಾವಣಿ, ಶೀಟ್ ಹಾಗೂ ಹೆಂಚಿನ ಮೇಲ್ಛಾವಣಿ ಹೊಂದಿರುವ ಶಾಲೆಗಳು ಎಷ್ಟು ಎಂಬುದರ ಬಗ್ಗೆ ತಾಲ್ಲೂಕು ವಾರು ವಿವರ ನೀಡಬೇಕು. ಶಾಲೆಗಳ ದುರಸ್ತಿಗಾಗಿ ಒದಗಿಸಲಾಗಿರುವ ಅನುದಾನದ ಖರ್ಚು ವೆಚ್ಚದ ಮಾಹಿತಿ ನೀಡಬೇಕು ಎಂದು ಅಧಿಕಾರಿಗಳಿಗೆ ತಾಕೀತು ಮಾಡಿದರು.

ಜಿಲ್ಲೆಯ ಸರ್ಕಾರಿ ಹಾಗೂ ಅನುದಾನಿತ ಪ್ರಾಥಮಿಕ ಶಾಲೆಗಳ ವಿದ್ಯಾರ್ಥಿಗಳಿಗೆ ಟ್ರಸ್ಟ್ ಮೂಲಕ ಶಾಲಾ ಬ್ಯಾಗ್, ಪುಸ್ತಕ, ಅತ್ಯುತ್ತಮವಾದ ಬಟ್ಟೆಗಳನ್ನು ವಿತರಣೆ ಮಾಡಿಸಲು ಕ್ರಮ ವಹಿಸಲಾಗುವುದು. ಮುಂಬರುವ ಶೈಕ್ಷಣಿಕ ವರ್ಷ ಪ್ರಾರಂಭವಾಗುವ ಮೊದಲು ತಾಲ್ಲೂಕುವಾರು ಪ್ರಾಥಮಿಕ ಶಾಲೆಗಳ ಸಂಪೂರ್ಣ ಮಾಹಿತಿ ನೀಡುವಂತೆ ಶಿಕ್ಷಣ ಇಲಾಖೆ ಅಧಿಕಾರಿಗಳಿಗೆ ಹೇಳಿದರು.

**ತಜ್ಞ ವೈದ್ಯರ ನೇಮಕಕ್ಕೆ ಕ್ರಮ ವಹಿಸಿ:** ಜಿಲ್ಲೆಯ ತಾಲ್ಲೂಕು ಆಸ್ಪತ್ರೆ, ಸಮುದಾಯ ಆರೋಗ್ಯ ಕೇಂದ್ರ, ಪ್ರಾಥಮಿಕ ಆರೋಗ್ಯ ಕೇಂದ್ರ ಸೇರಿದಂತೆ ಆರೋಗ್ಯ ಸಂಸ್ಥೆಗಳಲ್ಲಿ ಖಾಲಿ ಇರುವ ತಜ್ಞ ವೈದ್ಯರ ಹುದ್ದೆಗಳ ಭರ್ತಿಗೆ ಅಗತ್ಯ ಕ್ರಮ ವಹಿಸಬೇಕು ಜಿಲ್ಲಾ ಆರೋಗ್ಯಾಧಿಕಾರಿ ಡಾ. ಜಿ.ಪಿ.ರೇಣುಪ್ರಸಾದ್ ಅವರಿಗೆ ತಿಳಿಸಿದರು. ಜಿಲ್ಲೆಯಲ್ಲಿ 29 ತಜ್ಞ ವೈದ್ಯರ ಕೊರತೆ ಇದೆ. ಸಾರ್ವಜನಿಕ ಆಸ್ಪತ್ರೆ, ಸಮುದಾಯ ಆರೋಗ್ಯ ಕೇಂದ್ರಗಳಲ್ಲಿ ಖಾಲಿ ಇರುವ ವೈದ್ಯರ ಹುದ್ದೆಗಳಿಗೆ ಮೂರು ಬಾರಿ ಪತ್ರಿಕೆ ಪ್ರಕಟಣೆ ನೀಡಿದ್ದು, ಇಬ್ಬರು ಸ್ತ್ರೀರೋಗ ತಜ್ಞರು ಮಾತ್ರ ಹಾಜರಾಗಿದ್ದು, ಸಮುದಾಯ ಆರೋಗ್ಯ ಕೇಂದ್ರ ಸಿರಿಗೆರೆ–1 ಹಾಗೂ ಬೆಲಗೂರು–1 ಹುದ್ದೆಗೆ ನೇಮಕ ಮಾಡಲಾಗಿದೆ. ಉಳಿದಂತೆ ಯಾವ ತಜ್ಞ ವೈದ್ಯರು ಹಾಜರಾಗಿರುವುದಿಲ್ಲ. ಖಾಲಿ ಇರುವ ತಜ್ಞ ವೈದ್ಯರ ಹುದ್ದೆಗೆ ಮೊತ್ತೊಮ್ಮೆ ಪತ್ರಿಕಾ ಪ್ರಕಟಣೆ ನೀಡಿ ನೇರ ಸಂದರ್ಶನ ಮಾಡಲಾಗಿದೆ ಎಂದು ಜಿಲ್ಲಾ ಆರೋಗ್ಯಾಧಿಕಾರಿ ಡಾ.ಜಿ.ಪಿ.ರೇಣುಪ್ರಸಾದ್ ಸಭೆಗೆ ಮಾಹಿತಿ ನೀಡಿದರು. ತಜ್ಞ ವೈದ್ಯರ ನೇಮಕವನ್ನು ಗಂಭೀರವಾಗಿ ಪರಿಗಣಿಸಿ, ಜಿಲ್ಲಾಧಿಕಾರಿಗಳ ಮೂಲಕ ಆರೋಗ್ಯ ಇಲಾಖೆ ಆಯುಕ್ತರಿಗೆ ಪತ್ರ ಬರೆದು, ಕನಿಷ್ಠ ಆರೋಗ್ಯ ಸೇವೆ ಒದಗಿಸಲು ಅಗತ್ಯ ಕ್ರಮವಹಿಸಬೇಕು ಎಂದು ಸಂಸದರು ಸೂಚನೆ ನೀಡಿದರು.

ಜಿಲ್ಲಾಸ್ಪತ್ರೆಯ ಶವಾಗಾರಕ್ಕೆ ಕೋಲ್ಡ್ ಸ್ಟೋರೇಜ್ ತೀರಾ ಅವಶ್ಯಕವಾಗಿದ್ದು, ಕೋಲ್ಡ್ ಸ್ಟೋರೇಜ್‌ಗೆ ರೂ.10 ಲಕ್ಷ ಅನುದಾನವನ್ನು ಈಗಾಗಲೇ ಜಿಲ್ಲಾಧಿಕಾರಿಗಳಿಗೆ ನೀಡಲಾಗಿದೆ. ಈ ಕುರಿತು ಜಿಲ್ಲಾ ಶಸ್ತ್ರಚಿಕಿತ್ಸಕರು ಅನುಷ್ಠಾನಕ್ಕೆ ಕ್ರಮವಹಿಸಬೇಕು ಎಂದು ಸಂಸದ ಗೋವಿಂದ ಕಾರಜೋಳ ತಿಳಿಸಿದರು.

**ಕಾಟಾಚಾರದ ಕೆಲಸ ಸಲ್ಲದು:** ಜಲಜೀವನ್ ಮಿಷನ್ ಯೋಜನೆಯಡಿ ಜಿಲ್ಲೆಯಲ್ಲಿ ಕೈಗೊಂಡಿರುವ ಕಾಮಗಾರಿಗಳು ಗುಣಮಟ್ಟದಿಂದ ಕೂಡಿರಬೇಕು. ಯಾವುದೇ ಕಾರಣಕ್ಕೂ ಕಾಟಾಚಾರದ ಕೆಲಸ ಆಗಬಾರದು ಎಂದು ಸಂಸದ ಗೋವಿಂದ ಕಾರಜೋಳ ಅವರು ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ ಕಾರ್ಯಪಾಲಕ ಅಭಿಯಂತರ ಬಸವನಗೌಡ ಪಾಟೀಲ್‌ಗೆ ಸೂಚಿಸಿದರು.

ಎರಡು ವರ್ಷ ಪೂರ್ಣಗೊಂಡರೂ ಜಲಜೀವನ್ ಮಿಷನ್ ಯೋಜನೆಯ ಕಾಮಗಾರಿಗಳು ಮುಕ್ತಾಯಗೊಂಡಿಲ್ಲ. ಗ್ರಾಮಗಳಲ್ಲಿ ರಸ್ತೆ ಅಗೆದಿರುವುದರಿಂದ ಜನರ ಸಂಚಾರಕ್ಕೆ ತೊಂದರೆಯಾಗುತ್ತಿದೆ. ನೀವು ಕಾಮಗಾರಿಯನ್ನು ಸರಿಯಾಗಿ ಮೇಲ್ವಿಚಾರಣೆ ಮಾಡುತ್ತಿಲ್ಲ ಎಂದು ತಿಳಿಸಿದ ಸಂಸದರು, ಜಲಜೀವನ್ ಮಿಷನ್ ಯೋಜನೆಯಡಿ ಕೈಗೊಂಡಿರುವ ಕಾಮಗಾರಿಗಳು ನಿಗಧಿತ ಅವಧಿಯೊಳಗೆ ಪೂರ್ಣಗೊಳ್ಳಬೇಕು.

# ವಿದ್ಯುತ್ ಸಮಸ್ಯೆ ಖಂಡಿಸಿ ಗ್ರಾಮಸ್ಥರಿಂದ ಪ್ರತಿಭಟನೆ

» ಪರಶುರಾಂಪುರ



ಸಮೀಪದ ಕ್ಯಾದಿಗುಂಟೆ ಗ್ರಾಮದಲ್ಲಿ ಮಂಗಳವಾರ ರೈತರಿಗೆ ವ್ಯವಸ್ಥಿತವಾಗಿ ವಿದ್ಯುತ್ ಸರಬರಾಜು ಮಾಡುವಂತೆ ಒತ್ತಾಯಿಸಿ ಮಂಗಳವಾರ ರೈತರು ಹಾಗೂ ಗ್ರಾಮಸ್ಥರಿಂದ ಪ್ರತಿಭಟನೆ ನಡೆಸಿದರು.

ಕೃಷಿ ಪಂಪ್‌ಸೆಟ್‌ಗಳನ್ನ ನಂಬಿದ ರೈತರಿಗೆ ವಿದ್ಯುತ್ ಪೂರೈಕೆ ಸರಿಯಾಗಿ ಆಗದೆ ನೀಡುತ್ತೇವೆ ಎಂದು ಕೇವಲ ಬಾಯಿ ಮಾತಿಗೆ ಹೇಳುತ್ತಿದೆ. ಆದರೆ ವಾಸ್ತವವಾಗಿ ಪಾಲನೆಯಾಗದೆ ರೈತರು ಸಂಕಷ್ಟಕ್ಕೆ ಸಿಲುಕಿದ್ದಾರೆ. ರೈತರ ಬೆಂಬಲಕ್ಕೆ ನಿಲ್ಲಬೇಕಾಗಿದ್ದವರೇ ರೈತರನ್ನು ಶೋಷಣೆ ಮಾಡುತ್ತಿವೆ ಎಂದು ಆಕ್ರೋಶ ವ್ಯಕ್ತಪಡಿಸಿ, ಸ್ಥಳಕ್ಕೆ ಮೇಲಾಧಿಕಾರಿಗಳು ಬರುವವರೆಗೂ ತೆರಳುವುದಿಲ್ಲ ಎಂದು ಪಟ್ಟು ಹಿಡಿದರು.

ರೈತರಿಗೆ ಅಗತ್ಯವಿರುವ ವಿದ್ಯುತ್ ಪೂರೈಸದೆ ಅನ್ನದಾತರನ್ನು ತೊಂದರೆಗೆ ಸಿಲುಕಿಸಲಾಗುತ್ತಿದೆ. ಸಂಬಂಧಿಸಿದ ಅಧಿಕಾರಿಗಳು ಅಗತ್ಯಕ್ರಮ ಕೈಗೊಂಡು ರೈತರಿಗೆ ವಿದ್ಯುತ್ ನೀಡಿದಲ್ಲಿ ಅವರು ಇಡೀ ದೇಶಕ್ಕೆ ಅನ್ನ ನೀಡುತ್ತಾರೆ. ರೈತಪರ ಹೋರಾಟಕ್ಕೆ ಬೆಂಬಲವಾಗಿ ನಿಲ್ಲುವುದಾಗಿ ಪ್ರತಿಭಟನಕಾರರು ತಿಳಿಸಿದರು.


ಪುಟ 3


## ಎಂಇಎಸ್ ಪುಂಡರ ಹಾವಳಿ ವಿರುದ್ಧ ಕಾನೂನು ಕ್ರಮಕ್ಕೆ ಆಗ್ರಹ

» ಚಳ್ಳಕೆರೆ

ಬೆಳಗಾವಿಯ ಎಂಇಎಸ್ ಪುಂಡರು ಕರ್ನಾಟಕ ರಾಜ್ಯ ರಸ್ತೆಸಾರಿಗೆ ಸಂಸ್ಥೆ ಸಿಬ್ಬಂದಿ ಮೇಲೆ ಹಲ್ಲೆ ನಡೆಸಿದ್ದನ್ನು ಕರ್ನಾಟಕ ರಕ್ಷಣಾ ವೇದಿಕೆ(ಶಿವರಾಮೇಗೌಡರ ಬಣ) ತಾಲ್ಲೂಕು ಅಧ್ಯಕ್ಷ ನಗರಂಗೆರೆ ಎಚ್.ಬಾಬು ತೀವ್ರವಾಗಿ ಖಂಡಿಸಿ ತಹಶೀಲ್ದಾರ್‌ಗೆ ಮನವಿ ನೀಡಿದರು. ರಾಜ್ಯ ಸರ್ಕಾರ ಹಲ್ಲೆ ನಡೆಸಿದ ಎಂಇಎಸ್‌ನ ಪುಂಡರ ಮೇಲೆ ಸೂಕ್ತ ಕಾನೂನು ಕ್ರಮ ಕೈಗೊಳ್ಳಬೇಕಲ್ಲದೆ, ಇಂತಹ ಘಟನೆಗಳು ಮರುಕಳಿಸದಂತೆ ಎಚ್ಚರಿಕೆ ವಹಿಸಬೇಕಿದೆ. ಕಳೆದ ಹಲವಾರು ವರ್ಷಗಳಿಂದ ಬೆಳಗಾವಿಯಲ್ಲಿ ಎಂಇಎಸ್ ಪುಂಡರ ಗಲಾಟೆ ಸಾಮಾನ್ಯವಾಗಿದೆ. ಅನಗತ್ಯವಾಗಿ ವಿವಾದವನ್ನು ಎಬ್ಬಿಸಿ ಕನ್ನಡಿಗರ ಶಾಂತಿ, ತಾಳ್ಮೆ ಪರೀಕ್ಷೆ ಮಾಡುತ್ತಿದ್ದು ಸರ್ಕಾರ ಇವರ ಮೇಲೆ ಬೀಗಿ ಕಾನೂನು ಕ್ರಮ ಕೈಗೊಳ್ಳದೇ ಇದ್ದಲ್ಲಿ ಸರ್ಕಾರ ವಿರುದ್ಧ ಹೋರಾಟ ನಡೆಸುವುದಾಗಿ ತಿಳಿಸಿದರು.


ಪುಟ 3


## ಪ್ರಮುಖ ಸುದ್ದಿ

### ಭಗಿರಥ ಗುರುಪೀಠದ ಶ್ರೀ ಪುರುಷೋತ್ತಮಾನಂದಪುರಿ ಸ್ವಾಮೀಜಿ ಅಭಿಮತ

# ಮಕ್ಕಳಲ್ಲಿ ಸಂಸ್ಕಾರವಿದ್ದರೆ, ಎಲ್ಲೆಡೆ ಪುರಸ್ಕಾರ ಸಿಗುತ್ತದೆ

» ಹೊಸದುರ್ಗ



ಜಗತ್ತಿನಲ್ಲಿರುವ ಎಲ್ಲಾ ಸಂಪತ್ತನ್ನು ಬಳಸಿದಷ್ಟು ಕಡಿಮೆಯಾಗುತ್ತಾ ಹೋಗುತ್ತದೆ. ಆದರೆ, ವಿದ್ಯೆ ಬಳಸಿದಷ್ಟು ಹೆಚ್ಚುತ್ತಾ ಹೋಗುತ್ತದೆ. ವಿದ್ಯೆಗಿಂತ ಸಂಪತ್ತು ಮತ್ತೊಂದಿಲ್ಲ. ಹಾಗಾಗಿ, ಪೋಷಕರು ಆಸ್ತಿ ಮಾಡುವ ಬದಲಾಗಿ ತಮ್ಮ ಮಕ್ಕಳನ್ನೇ ವಿದ್ಯಾವಂತರನ್ನಾಗಿ ಮತ್ತು ಒಳ್ಳೆಯ ಸಂಸ್ಕಾರವಂತರನ್ನಾಗಿ ಮಾಡಿ. ನಿಜವಾದ ಆಸ್ತಿಯೇ ನಿಮ್ಮ ಮಕ್ಕಳು, ಅವರನ್ನು ಸರಿಯಾದ ಕ್ರಮದಲ್ಲಿ ಬೆಳೆಸಿ, ದೇಶದ ಆಸ್ತಿಯನ್ನಾಗಿ ಮಾಡಿ ಎಂದು ಬ್ರಹ್ಮವಿದ್ಯಾನಗರದ ಭಗೀರಥ ಗುರುಪೀಠದ ಶ್ರೀ ಪುರುಷೋತ್ತಮಾನಂದಪುರಿ ಸ್ವಾಮೀಜಿ ಹೇಳಿದರು.

ತಾಲೂಕಿನ ಲಕ್ಕಿಹಳ್ಳಿ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಮಂಗಳವಾರ ಆಯೋಜಿಸಿದ್ದ ಕ್ಲಸ್ಟರ್ ಮಟ್ಟದ "ಕಲಿಕಾ ಹಬ್ಬ" ಕಾರ್ಯಕ್ರಮದ ದಿವ್ಯ ಸಾನಿಧ್ಯವಹಿಸಿ ಅವರು ಮಾತನಾಡಿದರು.

ಜಮೀನು, ಚಿನ್ನ, ಬೆಳ್ಳಿ, ಹಣ ಹಾಗೂ ಇನ್ನಿತರ ಎಲ್ಲದರಲ್ಲಿಯೂ ಬೇರೆಯವರು ನಮ್ಮಿಂದ ಪಾಲು ಪಡೆಯಬಹುದು. ಆದರೆ, ನಾವು ಕಲಿತಂತಹ ವಿದ್ಯೆಯನ್ನು ಪಾಲು ಪಡೆಯಲು ಸಾಧ್ಯವಿಲ್ಲ. ವಿದ್ಯೆ ಸಾಧಕನ ಸ್ವತ್ತೇ ಹೊರತು, ಸೋಮಾರಿಗಳ ಸ್ವತ್ತಲ್ಲ. ಜಗತ್ತಿನಲ್ಲಿ ಜ್ಞಾನಕ್ಕಿಂತ ಸಂಪತ್ತು ಮತ್ತೊಂದಿಲ್ಲ. ಮಕ್ಕಳಿಗೆ ತಂದೆ–ತಾಯಿ, ಪಾಠ ಕಲಿಸಿದ ಶಿಕ್ಷಕರಿಗಿಂತ ದೊಡ್ಡ ದೇವರಿಲ್ಲ. ಇವರೇ ನಿಮ್ಮ ಪಾಲಿನ ನಿಜವಾದ ದೇವರುಗಳು. ಮಕ್ಕಳು ಪೋಷಕರು ಮತ್ತು ಶಿಕ್ಷಕರಿಗೆ ಗೌರವ ಕೊಟ್ಟು ನಡೆದಾಗ ಮಾತ್ರ, ಸಾಧನೆ ಮಾಡಲು ಸಾಧ್ಯವಾಗುತ್ತದೆ ಎಂದು ಮಕ್ಕಳಿಗೆ ಸಲಹೆ ನೀಡಿದರು.

ಕಾರ್ಯಕ್ರಮ ಉದ್ಘಾಟಿಸಿ ಶಾಸಕ ಬಿ.ಜಿ.ಗೋವಿಂದಪ್ಪ ಮಾತನಾಡಿ, ಮಕ್ಕಳಿಗೆ ಉತ್ತಮ ಗುಣಮಟ್ಟದ ಶಿಕ್ಷಣ ನೀಡಬೇಕೆಂದು ಸರ್ಕಾರ ಪ್ರಾಥಮಿಕ ಶಾಲೆಗಳಲ್ಲಿ ಪ್ರಾಯೋಗಿಕವಾಗಿ ಹಲವು ರೀತಿಯ ಕಾರ್ಯಕ್ರಮಗಳನ್ನು ಆಯೋಜನೆ ಮಾಡುತ್ತಿದೆ. ಕಲಿಕಾ ಹಬ್ಬದಂತಹ ಕಾರ್ಯಕ್ರಮಗಳು ಗ್ರಾಮೀಣ ಭಾಗದ ಮಕ್ಕಳಿಗೆ ಬೇಕಿದೆ. ಪ್ರತಿಭಾ ಕಾರಂಜಿಯಂತಹ ಕಾರ್ಯಕ್ರಮಗಳ ಮೂಲಕ ಮಕ್ಕಳ ಪ್ರತಿಭೆಯನ್ನು ಹೊರ ತರುವ ಕೆಲಸವಾಗುತ್ತಿದೆ. ಕಲಿಕಾ ಹಬ್ಬದಲ್ಲಿ ಎ.ಬಿ.ಡಿ ಗಿಂತ ಸಿಹಿ ಗುಂಪಿನ ಮಕ್ಕಳ ಬಗ್ಗೆ ಆಸಕ್ತಿವಹಿಸಿ, ಗುರುತಿಸಿ. ಈ ಹಿಂದೆ ಶಾಲೆ ಗ್ರಾಮದ ಒಳಗಡೆ ಇದ್ದಾಗ ಬಹಳ ಸಮಸ್ಯೆ ಆಗಿತ್ತು. ಆದರೆ, ಈಗ ಆಗಿಲ್ಲ. ಗ್ರಾಮದ ಶಿವಣ್ಣ ಮತ್ತು ಅವರ ಮಕ್ಕಳು ಜಮೀನನ್ನು ಶಾಲೆಗೆ ದಾನ ನೀಡಿದ್ದಾರೆ. ಮುಂದೆ ಅವರನ್ನು ಸನ್ಮಾನಿಸಿ, ಗೌರವಿಸುವ ಕಾರ್ಯವಾಗಬೇಕು ಎಂದರು. ಮುಖಂಡ ಸದ್ಗುರು ಪ್ರದೀಪ್ ಮಾತನಾಡಿ, ಯಾವ ಗ್ರಾಮಗಳಲ್ಲಿ ದೇವಾಲಯಗಳಿಗಿಂತ ಹೆಚ್ಚಾಗಿ ಶಾಲೆಯ ಗಂಟೆಯ ಶಬ್ದ ಕೇಳುತ್ತದೆಯೋ, ಅಂತಹ ಗ್ರಾಮಗಳು ಪ್ರಗತಿ ಸಾಧಿಸಲು ಸಾಧ್ಯ. ಶೈಕ್ಷಣಿಕವಾಗಿ ಮುಂದೆ ಬಂದರೆ ಎಲ್ಲಾ ರಂಗಗಳಲ್ಲೂ ಕೂಡ ಪ್ರಗತಿ ಕಾಣಲು ಸಾಧ್ಯವಿದೆ. ಪೋಷಕರು ತಮ್ಮ ಮಕ್ಕಳಿಗೆ ಒಳ್ಳೆಯ ಶಿಕ್ಷಣ ಕೊಡಿಸುವುದರ ಜೊತೆಗೆ ಸಂಸ್ಕಾರವಂತರನ್ನಾಗಿ ಮಾಡಬೇಕು. ಸಂಸ್ಕಾರ ಒಂದಿದ್ದರೆ, ಪುರಸ್ಕಾರಗಳು ಹುಡುಕಿಕೊಂಡು ಬರುತ್ತವೆ ಎಂದು ತಿಳಿಸಿದರು. ಕಾರ್ಯಕ್ರಮದಲ್ಲಿ ಪ್ರಾಸ್ತಾವಿಕವಾಗಿ ಕ್ಷೇತ್ರ ಶಿಕ್ಷಣಾಧಿಕಾರಿ ಸೈಯ್ಯದ್ ಮೋಸಿನ್ ಮಾತನಾಡಿದರು. ಶಾಲೆಯ ಮುಖ್ಯಶಿಕ್ಷಕ ಜಿ.ಹೆಚ್.ಪ್ರಕಾಶ್ ಸ್ವಾಗತಿಸಿದರು. ಗ್ರಾ.ಪಂ. ಅಧ್ಯಕ್ಷೆ ಲಕ್ಷ್ಮಿದೇವಿ ಮುದ್ದಪ್ಪ ಅಧ್ಯಕ್ಷತೆ ವಹಿಸಿದ್ದರು. ಎಸ್.ಡಿ.ಎಂ.ಸಿ ಅಧ್ಯಕ್ಷ ವಿಜಯಕುಮಾರ್, ಸಿ.ಆರ್.ಪಿ ರವಿಶಂಕರ್, ಕೆಡಿಪಿ ಸದಸ್ಯ ಲೋಕೇಶ್, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಹನುಮಂತಪ್ಪ, ಗ್ರಾ.ಪಂ ಸದಸ್ಯರಾದ ದಾರಮಾದಪ್ಪ, ಕರಿಯಪ್ಪ, ಲಕ್ಷ್ಮಿದೇವಿ ಮತ್ತು ಲೀಲಾವತಿ ಸೇರಿದಂತೆ ಶಾಲಾ ಶಿಕ್ಷಕರು ಮತ್ತು ವಿದ್ಯಾರ್ಥಿಗಳಿದ್ದರು.

# ಮಾನವ ಹುಟ್ಟು ಇರುವಿಕೆ ಉದ್ದೇಶ ಮುಕ್ತಿಯಾಗಿದೆ

» ಚಿತ್ರದುರ್ಗ

ಮಾನವ ಹುಟ್ಟಿನ ಉದ್ದೇಶ, ಇರುವಿಕೆಯ ಉದ್ದೇಶ ಮುಕ್ತಿಯಾಗಿದೆ ಎಂದು ಆದಿಚುಂಚನಗಿರಿ ಮಹಾ ಸಂಸ್ಥಾನದ ಪೀಠಾಧ್ಯಕ್ಷರಾದ ಶ್ರೀ ಜಗದ್ಗುರು ಡಾ.ನಿರ್ಮಲಾನಂದಸ್ವಾಮಿ ತಿಳಿಸಿದ್ದಾರೆ.

ಚಿತ್ರದುರ್ಗ ನಗರದ ಕಬೀರಾನಂದ ನಗರದಲ್ಲಿ ಕಬೀರಾನಂದಾಶ್ರಮದ ವತಿಯಿಂದ ನಡೆಯುತ್ತಿರುವ 95ನೇ ಮಹಾ ಶಿವರಾತ್ರಿ ಮಹೋತ್ಸವದ ಮೂರನೇ ದಿನದ ಸಾನಿಧ್ಯವಹಿಸಿ ಮಾತನಾಡಿದ ಶ್ರೀಗಳು, ಮುಕ್ತಿಯನ್ನು ಪಡೆಯಲು ಹೋಗಲು ಮೂರು ವ್ಯವಸ್ಥೆಗಳಿವೆ ದ್ವೈತ ಪರಂಪರೆ, ವಿಶಿಷ್ಟ ಅದ್ವೈತ್ವ ಪರಂಪರೆ, ಅದ್ವೈತ್ವ ಪರಂಪರೆಗಳಾಗಿವೆ. ಸಿದ್ದಾರೂಢ ಸಂಪ್ರಾಯದಲ್ಲಿ ಬರುವ ಎಲ್ಲಾ ಮಠಗಳು ಸಹಾ ಅದ್ವೈತ್ವ ಆಶ್ರಮವಾಗಿದೆ. ಅದ್ವೈತ್ವದಲ್ಲಿ ಸುಮ್ಮನೆ ಇರುವುದು ಅಥವಾ ಮಾತಿಲ್ಲದಿರುವುದು ಆಗಿದೆ. ಆದ್ವೈತ್ವ ಸ್ಥಿತಿಗೆ ಬರುವ ಸಾಧಕ ಉತ್ತರದಲ್ಲಿ ಹೇಳಿದ ಕ್ರಿಯೇಯೇ ಸ್ವಂತ ಹಂತದಲ್ಲಿ ನಡೆಯುವ ಕ್ರಿಯೆಯಾಗಿದೆ ಎಂದರು.

ಜ್ಞಾನದ ನುಡಿಗಳನ್ನು ಹೇಳುವ ರೀತಿಯಲ್ಲಿ ಹೇಳಿದ್ದೇ ಆದರೆ, ನುಡಿಯನ್ನು ಬಳಸುವ ರೀತಿಯಲ್ಲಿ ಬಳಸಿದ್ದೇ ಆದರೆ, ಕೇಳುವ ರೀತಿಯಲ್ಲಿ ಕೇಳಿದ್ದೆ ಆದರೆ, ಅದನ್ನು ಅನುಷ್ಠಾನ ಮಾಡುವ ರೀತಿಯಲ್ಲಿ ಮಾಡಿದ್ದೇ ಆದರೆ, ಶಿವರಾತ್ರಿಯಂದು ಶ್ರೀಗಳು ಹಲವಾರು ಸಂತರನ್ನು ಕರೆಯಿಸಿ ಅವರಿಂದ ಭಕ್ತರಿಗೆ ಉಪದೇಶವನ್ನು



ಕೊಡಿಸುವುದರಮೂಲಕಶಿವದರ್ಶನವನ್ನು ಮಾಡಿಸುತ್ತಿದ್ದಾರೆ. ಶಿವರಾತ್ರಿಯು ಸುತ್ತಾ-ಮುತ್ತಲ ದಿನದಲ್ಲಿ ವಿಶ್ವ ಚೈತನ್ಯ ಶಕ್ತಿ ಎನ್ನುವುದು ಎತ್ತರದಲ್ಲಿ ಇರುತ್ತದೆ. ವರ್ಷದ ಒಂದು ದಿನ ಶಿವರಾತ್ರಿಯಂದು ಸುತ್ತಾ-ಮುತ್ತಲ್ಲಿನ ದಿನದಲ್ಲಿ ಈ ರೀತಿಯಾದ ಕಾರ್ಯಕ್ರಮಗಳನ್ನು ಮಾಡುವುದರ ಮೂಲಕ ಭಕ್ತರಿಗೆ ಶಿವನ ಕರುಣೆಯನ್ನು ತೋರಿಸಬೇಕಿದೆ ಎಂದರು.

ಶಿವಶರಣ ಮಾದಾರ ಚನ್ನಯ್ಯ ಗುರುಪೀಠದ ಶ್ರೀ ಬಸವಮೂರ್ತಿ ಮಾದಾರ ಚನ್ನಯ್ಯ ಶ್ರೀಗಳು ಮಾತನಾಡಿ, ವಿಜ್ಞಾನ ತಂತ್ರಜ್ಞಾನ ಮುದೆ ಹಸಿವಿ ಮಹತ್ವ ತಿಳಿಯುವುದಿಲ್ಲ, ವರ್ಷಕ್ಕೆ ಒಮ್ಮೆಯಾದರೂ ದೇವರ ಹೆಸರಿನಲ್ಲಿ ಉಪವಾಸವನ್ನು ಮಾಡುವುದು ನಮ್ಮ ಕರ್ತವ್ಯವಾಗಿದೆ ಇದರಿಂದಲೇ ಶಿವರಾತ್ರಿಯನ್ನು ನಮ್ಮ ಹಿರಿಯರು ಪದ್ಧತಿಯಾಗಿ ಮಾಡಿದರು. ನಮ್ಮಲ್ಲಿ ಆಧ್ಯಾತ್ಮಿಕವಾದ ಚಿಂತನೆ ಹೆಚ್ಚಾಗಬೇಕಿದೆ. ಇದು ಇಂತಹ ಕಾರ್ಯಕ್ರಮಗಳಲ್ಲಿ ಸಕ್ರಿಯವಾಗಿ ಭಾಗವಹಿಸುವುದರ ಮೂಲಕ ಪಡೆಯಬಹುದಾಗಿದೆ ಎಂದರು.

ಸಂಸದರಾದ ಗೋವಿಂದ ಕಾರಜೋಳ ರವರು ಮಾತನಾಡಿ, 12ನೇ ಶತಮಾನದಲ್ಲಿ ಜನರ ಮೇಲೆ ನಡೆಯುತ್ತಿರುವ ಶೋಷಣೆಯನ್ನು ತಪ್ಪಿಸುವ ಸಲುವಾಗಿ ಹೊಸದಾದ ವ್ಯವಸ್ಥೆಯನ್ನು ಹುಟ್ಟು ಹಾಕಲಾಯಿತು. ಅಂಧಿನ ಕಾಲದ ಆಶ್ರಮಗಳು ಇಂದಿನ ಕಾಲದ ಮಠಗಳಾಗಿ ರೂಪುಗೊಂಡಿವೆ, ಕಾಯಕ ಪ್ರಜ್ಞೆಯನ್ನು ಮೈಗೂಡಿಸಿಕೊಂಡಾಗ ಮಾತ್ರ ನಿಜವಾದ ಅರ್ಥದಲ್ಲಿ ಬಸವ ತತ್ವವನ್ನು ಪಾಲಿಸಿದಂತೆ ಆಗುತ್ತದೆ. ಶಿವರಾತ್ರಿ ಭಕ್ತಿಯ ಆಚರಣೆಯಾಗಿದೆ. ಇದರಲ್ಲಿ ಎಲ್ಲರು ಸಕ್ರಿಯವಾಗಿ ಭಾಗವಹಿಸುವುದರ ಮೂಲಕ ಶಿವನ ಕೃಪೆಗೆ ಪಾತ್ರರಾಗಬೇಕಿದೆ ಎಂದರು.

ಕಾರ್ಯಕ್ರಮದಲ್ಲಿ ಶ್ರೀ ಕಬೀರಾನಂದಾಶ್ರಮದ ಶ್ರೀ ಶಿವಲಿಂಗಾನಂದ ಶ್ರೀಗಳು, ಉದಯಚಲದ ಶ್ರೀ ಸದ್ಗುರು ಸೇವಾಶ್ರಮ ಟ್ರಸ್ಟ್‌ನ ಶ್ರೀ ಶ್ರೀಕಾಂತಾನಂದ ಭಗವಾನ್ ಸರಸ್ವತಿ ಶ್ರೀಗಳು, ಐಜಿಪಿ ರವಿಕಾಂತೇಗೌಡ, ನಗರಸಭೆಯ ಉಪಾಧ್ಯಕ್ಷರಾದ ಶ್ರೀಮತಿ ಶ್ರೀದೇವಿ ಚಕ್ರವರ್ತಿ, ನಿವೃತ್ತ ಐಎಎಸ್ ಅಧಿಕಾರಿ ಭೀಮಯ್ಯ, ನಿವೃತ್ತ ನಿರ್ದೇಶಕರಾಧ ಶ್ರೀಮತಿ ಕಮಲಮ್ಮ, ಬಿಜೆಪಿ ಯುವ ಮುಖಂಡರಾಧ ಅನಿತ್ ಕುಮಾರ್, ಮದಕರಿ ವಿದ್ಯಾ ಸಂಸ್ಥೆಯ ಅಧ್ಯಕ್ಷರಾದ ಎಸ್.ಸುಂದೀಪ್, ನಗರಾಭಿವೃದ್ಧಿ ಪ್ರಾಧಿಕಾರದ ಮಾಜಿ ಅಧ್ಯಕ್ಷರಾದ ಜಿ.ಟಿ.ಸುರೇಶ್, ಜೆಡಿಎಸ್ ಜಿಲ್ಲಾಧ್ಯಕ್ಷರಾದ ಜಯ್ಯಣ್ಣ, ಬಿಜೆಪಿ ನಗರಾಧ್ಯಕ್ಷರಾದ ಲೋಕೇಶ್, ಜಿಲ್ಲಾ ಒಕ್ಕಲಿಗರ ಸಂಘದ ಅಧ್ಯಕ್ಷರಾದ ಚೇತನಬಾಬು, ಕುಮಾರಗೌಡ, 95ನೇ ಮಹಾ ಶಿವರಾತ್ರಿ ಮಹೋತ್ಸವ ಸಮಿತಿಯ ಅಧ್ಯಕ್ಷರಾದ ವಿಜಯಕುಮಾರ್ ಭಾಗವಹಿಸಿದ್ದರು. ಸುಬ್ರಾಯ ಭಟ್ಟರು ವೇಧ ಘೋಷ ಮಾಡಿದರೆ ಪ್ರಜ್ವಲ್ ಪ್ರಾರ್ಥಿಸಿದರು, ಮಂಜುನಾಥ್ ಗುಪ್ತ ಸ್ವಾಗತಿಸಿದರು ಹುರಳಿ ಬಸವರಾಜು ಕಾರ್ಯಕ್ರಮ ನಿರೂಪಿಸಿದರು. ಜಾನಪದ ಗಾಯಕಿ ಶ್ರೀಮತಿ ಸವಿತಕ್ಕ ಮತ್ತು ತಂಡದಿಂದ ಭಕ್ತಿ ಜಾನಪದ ಶಿವರಾತ್ರಿ ಕಾರ್ಯಕ್ರಮ ನಡೆಯಿತು.

## ಫಾಸ್ಟ್ ನ್ಯೂಸ್

### ಶಾಲಾ ಕೊಠಡಿ ದುರಸ್ತಿಗೆ 3 ತಿಂಗಳ ಗಡುವು

» ಮೊದಲ ಪುಟದಿಂದ

ಒಂದು ವೇಳೆ ನಿಗಧಿತ ಅವಧಿಯೊಳಗೆ ಕಾಮಗಾರಿ ಪೂರ್ಣಗೊಳಿಸದ ಗುತ್ತಿಗೆದಾರರನ್ನು ವಜಾಗೊಳಿಸಬೇಕು ಎಂದು ತಾಕೀತು ಮಾಡಿದರು. ಇದಕ್ಕೆ ಪ್ರತಿಕ್ರಿಯಿಸಿದ ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ ಕಾರ್ಯಪಾಲಕ ಅಭಿಯಂತರ ಬಸವನಗೌಡ ಪಾಟೀಲ್, ಕಾಮಗಾರಿ ವಿಳಂಬವಾದ ಕಡೆ ತ್ವರಿತವಾಗಿ ಕಾಮಗಾರಿ ಪೂರ್ಣಗೊಳಿಸಲು ಕ್ರಮವಹಿಸಲಾಗುವುದು ಎಂದರು. ಬೇಸಿಗೆ ಕಾಲದಲ್ಲಿ ಜಿಲ್ಲೆಯಲ್ಲಿ ಕುಡಿಯುವ ನೀರಿನ ತೊಂದರೆಯಾಗದಂತೆ ಅಗತ್ಯ ಮುಂಜಾಗ್ರತಾ ಕ್ರಮ ಕೈಗೊಳ್ಳಬೇಕು. ಜಿಲ್ಲೆಯಲ್ಲಿ 1056 ಶುದ್ಧ ಕುಡಿಯುವ ನೀರಿನ ಘಟಕಗಳಿದ್ದು, ಈ ಪೈಕಿ ಕೆಟ್ಟುಹೋಗಿರುವ ಘಟಕಗಳನ್ನು ರಿಪೇರಿ ಮಾಡಿಸಿ, ನೀರು ಪೂರೈಸುವಂತೆ ಮಾಡಬೇಕು. ಚಾಲ್ತಿಯಲ್ಲಿರುವ ಘಟಕಗಳ ನಿರ್ವಹಣೆ ಸಮರ್ಪಕವಾಗಿರಬೇಕು ಎಂದು ಸಂಸದರು ತಿಳಿಸಿದರು.ಹಕ್ಕು ಪತ್ರ ವಿತರಿಸಿ: ಕೊಳಗೇರಿ ಎಂದು ಘೋಷಣೆಯಾಗಿರುವ ಪ್ರದೇಶಗಳಲ್ಲಿ ವಾಸಿಸುತ್ತಿರುವ ಜನರಿಗೆ ಶೀಘ್ರದಲ್ಲಿ ಹಕ್ಕುಪತ್ರ ವಿತರಿಸಿ, 15 ದಿನದೊಳಗೆ ಕೊಳಚೆ ನಿರ್ಮೂಲನಾ ಮಂಡಳಿ ವತಿಯಿಂದ ಎಲ್ಲ ಹಕ್ಕುಪತ್ರ ಫಲಾನುಭವಿಗಳಿಗೆ ನೊಂದಣಿ ಮಾಡಿಸಬೇಕು ಎಂದು ಸಂಸದ ಗೋವಿಂದ ಎಂ.ಕಾರಜೋಳ ಅಧಿಕಾರಿಗಳಿಗೆ ಸೂಚಿಸಿದರು.ಹಕ್ಕುಪತ್ರ ವಿತರಣಾ ಕಾರ್ಯಕ್ರಮಕ್ಕೆ ದಿನಾಂಕ ನಿಗದಿಮಾಡಿ, ಬಡವರು ಅಲೆದಾಟ ಮಾಡುವುದನ್ನು ತಪ್ಪಿಸುವ ನಿಟ್ಟಿನಲ್ಲಿ ಎಲ್ಲ ಹಕ್ಕುಪತ್ರ ಫಲಾನುಭವಿಗಳನ್ನು ನೋಂದಣಿ ಮಾಡಿಸಬೇಕು. ದಾವಣಗೆರೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಕೊಳಚೆ ನಿರ್ಮೂಲನಾ ಮಂಡಳಿಯ ಕಾರ್ಯಪಾಲಕ ಅಭಿಯಂತರರು ಚಿತ್ರದುರ್ಗದಲ್ಲಿ ವಾರದಲ್ಲಿ ಎರಡು ದಿನ ಗುರುವಾರ ಮತ್ತು ಶುಕ್ರವಾರ ಕರ್ತವ್ಯ ನಿರ್ವಹಿಸಬೇಕು. ಈ ಕುರಿತು ಆದೇಶ ಪತ್ರ ಹೊರಡಿಸುವಂತೆ ಜಿಲ್ಲಾಧಿಕಾರಿಗಳಿಗೆ ಸೂಚನೆ ನೀಡಿದರು.ಸಭೆಯಲ್ಲಿ ಶಾಸಕ ಕೆ.ಸಿ.ವೀರೇಂದ್ರ ಪಪ್ಪಿ, ಜಿಲ್ಲಾಧಿಕಾರಿ ಟಿ.ವೆಂಕಟೇಶ್, ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಎಸ್.ಜೆ. ಸೋಮಶೇಖರ್, ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ವಿಜಯ್ ಕುಮಾರ್ ಎಂ.ಸಂತೋಷ್ ಸೇರಿದಂತೆ ಜಿಲ್ಲಾ ಮತ್ತು ತಾಲ್ಲೂಕು ಮಟ್ಟದ ಅಧಿಕಾರಿಗಳು ಇದ್ದರು.

### ಹೊಳಲ್ಕೆರೆ: ಬ್ಯಾಡ್ಮಿಂಟನ್ ಕ್ರೀಡಾಂಗಣ ಉದ್ಘಾಟನೆ

» ಹೊಳಲ್ಕೆರೆ

ಹೊಳಲ್ಕೆರೆ ಪಟ್ಟದ ಪಟ್ಟಣದ ಜ್ಞಾಪನಂ ಫೌಂಡೇಶನ್ ವತಿಯಿಂದ ನಿರ್ಮಾಣ ಮಾಡಲಾಗಿರುವ ಶಟರ್, ಬ್ಯಾಡ್ಮಿಂಟನ್ ಕ್ರೀಡಾಂಗಣ ಉದ್ಘಾಟನೆ ಹಾಗೂ ಮಹಾಶಿವರಾತ್ರಿ ಹಬ್ಬದ ಅಂಗವಾಗಿ ಶಿವಾರ್ಪಣ ಕಾರ್ಯಕ್ರಮ ಆಯೋಜಿಸಲಾಗಿದೆ ಎಂದು ಜ್ಞಾಪನಂ ಫೌಂಡೇಶನ್ ಸಂಸ್ಥಾಪಕ ಜಯಸಿಂಹ ಖಾಟ್ರೋತ್ ತಿಳಿಸಿದ್ದಾರೆ.ಬುಧವಾರ ಸಂಜೆ ಕ್ರೀಡಾಂಗಣ ಉದ್ಘಾಟನೆ ಜೊತೆಗೆ ಕೋವಿಡ್ ಸಮಯದಲ್ಲಿ ಮೃತರನ್ನು ಅಂತ್ಯಕ್ರಿಯೆ ಮಾಡಲು ಹಿಂಜರಿಕೆ ಹಾಕುವಂತಹ ಸ್ಥಿತಿಯ ಮಧ್ಯೆಯು ಶವಸಂಸ್ಕಾರಕ್ಕೆ ಬೇಕಾದ ಎಲ್ಲ ರೀತಿ ಕೆಲಸ ಕಾರ್ಯ ನಿರ್ವಹಿಸಿದವರನ್ನು ಹಾಗೂ ಶಿವನ ಬೀಟಿಗೆ ಸಂಬಂಧಿಸಿದಂತೆ ಮೃತರ ಶವವನ್ನು ಸಾಗಿಸುವ ಅಂಬುಲೆನ್ಸ್ ಕೆಲಸಗಾರರು, ಸ್ಮಶಾನದಲ್ಲಿ ಗುಂಡಿ ತೆಗೆಯುವವರು, ಆಸ್ಪತ್ರೆಯ ಶವಗಾರದಲ್ಲಿ ಕರ್ತವ್ಯ ನಿರ್ವಹಿಸುವವರು ಸೇರಿದಂತೆ ಶಿವನ ಬೀಟನ್ನು ನಿತ್ಯ ಕಾಯಕವನ್ನಾಗಿ ಮಾಡಿಕೊಂಡಿರುವ ಕಾಯಕಯೋಗಿಗಳಾದ 22 ಜನರನ್ನ ಇದೆ ಸಮಯದಲ್ಲಿ ಗೌರವಿಸಲಾಗುತ್ತದೆ. ಮಹಾಶಿವರಾತ್ರಿ ಹಬ್ಬದ ಅಂಗವಾಗಿ ವಿಶೇಷ ಜಾಗರಣ ಕಾರ್ಯಕ್ರಮದ ಅಂಗವಾಗಿ ಸಂಗೀತೋತ್ಸವ, 25 ಬಗೆಯ ಫಲಹಾರ, ಹಾಗೂ ಸೆಟಲ್ ಕ್ರೀಡಾಕೂಟ ನಡೆಸಲಾಗುತ್ತದೆ. ಶಿವಾರ್ಪಣ ಕಾರ್ಯಕ್ರಮದ ಉದ್ಘಾಟನೆಯನ್ನು ಸಂಸದ ಗೋವಿಂದ ಕಾರಜೋಳ ನೆರವೇರಿಸುವರು. ಬಿಜೆಪಿ ಪಕ್ಷದ ಮುಖಂಡರಾದ ಹೊಸದುರ್ಗದ ಲಿಂಗಮೂರ್ತಿ, ಶಿವಗಂಗಾ ಮಾಧುರಿ ಗಿರೀಶ್, ಪುರಸಭೆಯ ಅಧ್ಯಕ್ಷ ವಿಜಯ ಸಿಂಹ ಖಾಟ್ರೋತ್, ಉಪಾಧ್ಯಕ್ಷೆ ಎಚ್ ಆರ್ ನಾಗರತ್ನ ವೇದಮೂರ್ತಿ, ಪುರಸಭೆ ಸದಸ್ಯರಾದ ಡಿ.ಎಸ್. ವಿಜಯ್, ಮಮತಾ ಜಯಸಿಂಹ ಖಾಟ್ರೋತ್, ಸವಿತಾ ನರಸಿಂಹ ಖಾಟ್ರೋತ್ ,ಪಿ.ಹೆಚ್.ಮುರುಗೇಶ್, ಸೇರಿದಂತೆ ಸಮಾಜಮುಖಿ ಸೇವೆಯ ಹಲವಾರು ಮುಖಂಡರು ಪಾಲ್ಗೊಳ್ಳಲಿದ್ದಾರೆ ಎಂದು ತಿಳಿಸಿದರು.

### 26ಕ್ಕೆ ಮಾಚಿದೇವರ ದೇವಸ್ಥಾನದಲ್ಲಿ ರುದ್ರಾಭಿಷೇಕ

» ದಾವಣಗೆರೆ



ವಿನೋಬಾ ನಗರದ 1ನೇ ಮುಖ್ಯ ರಸ್ತೆ, 17ನೇ ತಿರುವಿನಲ್ಲಿರುವ ಶ್ರೀ ಮಡಿವಾಳ ಮಾಚಿದೇವ ಸಮುದಾಯ ಭವನದಲ್ಲಿರುವ ದೇವಸ್ಥಾನದಲ್ಲಿ ಶಿವರಾತ್ರಿ ಪ್ರಯುಕ್ತ 26ರ ಬುಧವಾರ ಸಂಜೆ 6.30ಕ್ಕೆ ಈಶ್ವರ ದೇವರಿಗೆ ರುದ್ರಾಭಿಷೇಕ, ಜಪ ಸೇರಿದಂತೆ ವಿಶೇಷ ಪೂಜೆ ಹಮ್ಮಿಕೊಳ್ಳಲಾಗಿದೆ. ಸರ್ವ ಭಕ್ತಾದಿಗಳು ಆಗಮಿಸಿ ದೇವರ ಕೃಪೆಗೆ ಪಾತ್ರರಾಗಲು ಮಡಿವಾಳ ಮಾಚಿದೇವ ಸಂಘ, ದಾವಣಗೆರೆ ಜಿಲ್ಲೆ ಇದರ ಅಧ್ಯಕ್ಷರು ಹಾಗೂ ಸರ್ವ ಪದಾಧಿಕಾರಿಗಳು ಕೋರಿದ್ದಾರೆ.

# ಬಾಲಶಂಕರ ಮಹಿಮೆ ಗಮಕ ವಾಚನ ವ್ಯಾಖ್ಯಾನ

» ಚಿತ್ರದುರ್ಗ

ಚಿತ್ರದುರ್ಗದ ಗಮಕ ಕಲಾಭಿಮಾನಿಗಳ ಸಂಘದ 40ನೇ ವಾರ್ಷಿಕೋತ್ಸವದ ಸ್ಮರಣೆಯ ಅಂಗವಾಗಿ ಏರ್ಪಡಿಸಿದ್ದ 19ನೆ ವಾಚನ ವ್ಯಾಖ್ಯಾನ ಕಾರ್ಯಕ್ರಮ ಇದೆ 23ನೇ ಭಾನುವಾರ ಸಂಜೆ ನಗರದ ಜೆಸಿಆರ್ ಗಣಪತಿ ದೇವಾಲಯದ ಸಭಾಂಗಣದಲ್ಲಿ ನಡೆಯಿತು.

ಬೆಂಗಳೂರು ಕವಿ ಕೆ.ಪಿ.ರತ್ನಾಕರ ಭಟ್ಟರು ಬರೆದ ಶ್ರೀ ಶಂಕರಾಯಣ ಕಾವ್ಯದ ಭಾಗದಲ್ಲಿ ಶ್ರೀ ಶಂಕರಾ ಚಾರ್ಯರ ಬಾಲ್ಯದ ಮಹಿಮೆಗಳನ್ನು ವರ್ಣಿಸುವ ಈ ಕಾರ್ಯಕ್ರಮವನ್ನು ಶ್ರೀ ಶಾರದಾ ಸಂಗೀತ ಕಲಾ ಕೇಂದ್ರದ ಮಕ್ಕಳೇ ನಡೆಸಿಕೊಟ್ಟದ್ದು ವಿಶೇಷವಾಗಿತ್ತು. ಕಾರ್ಯಕ್ರಮದಲ್ಲಿ ವಿದ್ವಾನ್ ಜಿ.ಎಸ್. ಗಣಪತಿ ಭಟ್ ಅವರು ಈ ಕಾವ್ಯವು ಶಂಕರಾಚಾರ್ಯರ ಮಹಿಮೆಯನ್ನು ಅತ್ಯಂತ ಹೃದಯಂಗಮವಾಗಿ ಬಣ್ಣಿಸುತ್ತದೆ. ಅದರಲ್ಲಿ ಶಂಕರರ ಬಾಲ್ಯ ಆ ಕಾಲದಲ್ಲಿ ತೋರಿದ ಅವರು ಸನ್ಯಾಸದ ಅಂಬಲ ಹಾಗೂ ಮಾತೃಭಕ್ತಿ ಅತ್ಯಂತ ಮನೋಜ್ಞವಾದದ್ದು. ಈ ಭಾಗದ ಸ್ಮರಣೆ ಎಲ್ಲರಿಗೂ ವಿಶೇಷವಾಗಿ ಮಕ್ಕಳಿಗೆ ಅತ್ಯಂತ ಶ್ರೇಯಸ್ಕರ ಎಂದರು.ಶಾರದಾ ಸಂಗೀತ ಕಲಾ ಕೇಂದ್ರದ ಮಕ್ಕಳಾದ ಸ್ತುತಿ ಸಿ.ಆರ್., ಸನ್ನಿಧಿ ಪಿ, ಎಚ್ .,ಅವನಿ ಬಿ.ಕೆ., ಮಾನ್ಯತಾ, ವಿಸ್ಮಯಿ ಬಿ. ಎನ್., ವೃತ್ತಿಕಾ ಕೆ. ವೈ., ನಿಹಾಲ್, ಆದ್ಯ ಹಾಗೂ ಸಿರಿ ಇವರು ಈ ವಾಚನ ವ್ಯಾಖ್ಯಾನವನ್ನು ನಡೆಸಿಕೊಟ್ಟರು. ಶಂಕರಾಚಾರ್ಯರ ಜನನ ಅವರ ಬಾಲ್ಯ, ವೈದಿಕ ಸಂಪಾದನೆ ,ಸನ್ಯಾಸದ ಅಂಬಲ, ಮೊಸಳೆಗೆ ಸಿಕ್ಕಿ ಹಾಕಿಕೊಳ್ಳುವುದು, ತಾಯಿ ಅನುಮೋದನೆ, ಸನ್ಯಾಸ ಸ್ವೀಕಾರ ,ದೇಶ ಪರ್ಯಟನೆ, ತಾಯಿ ಮರಣ ಹೊಂದಿದಾಗ ತಮ್ಮ ಕೈಯಲ್ಲಿ ಅಗ್ನಿಯನ್ನು ಸೃಷ್ಟಿಸಿಕೊಂಡು



ಆಕೆಯ ಶವಸಂಸ್ಕಾರ ಮಾಡುವುದು ಮೊದಲಾದ ಸಂಗತಿಗಳನ್ನು ಮಕ್ಕಳು ವಾಚನ ಮತ್ತು ವ್ಯಾಖ್ಯಾನ ಮಾಡಿದ ಪರಿ ನಿಜಕ್ಕೂ ಚೇತೋಹಾರಿಯಾಗಿತ್ತು.ವಿಶೇಷವಾಗಿ ಮೋಹನ, ರೇವತಿ, ಶುಭಪಂತುವರಾಳಿ, ಸಿಂಧು ಭೈರವಿ ಮುಂತಾದ ಕ್ಲಿಷ್ಟ ರಾಗಗಳನ್ನು ಬಳಸಿಕೊಂಡ ಪರಿ ಹಾಗೂ ಅಸ್ಖಲಿತ ವಾಣಿಯಲ್ಲಿ ಅದರ ವ್ಯಾಖ್ಯಾನ ಮಾಡಿದ್ದು ಸೈ ಸೈ ಎನ್ನುವಂತಿತ್ತು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಗಮಕ ,ಕಲಾಭಿಮಾನಿಗಳ ಸಂಘದ ಅಧ್ಯಕ್ಷೆ ಕೆ .ಆರ್ ರಮಾದೇವಿ ವೆಂಕಣ್ಣಾಚಾರ್ ಈ ಮಕ್ಕಳ ಕಲಾವಂತಿಕೆಯನ್ನು ನೋಡಿದರೆ ಗಮಕ ಕಲೆ ಉಳಿದು ಬಾಳುತ್ತದೆ ಎಂದು ಆಶಿಸುವಂತಾಗಿದೆ. ತಂದೆ ತಾಯಿಗಳು ದಯವಿಟ್ಟು ಇಂತಹ ಮಕ್ಕಳನ್ನು ಗಮಕ ಕಲೆಯನ್ನು ಕಲಿಯಲು ಪ್ರೋತ್ಸಾಹ ನೀಡಬೇಕು ಎಂದರು.ಈ ಮಕ್ಕಳಿಗೆ ಗಮಕ ಕಲೆಯಲ್ಲಿ ತರಬೇತಿ ಕೊಟ್ಟ ವಿದುಷಿ ಮೀನಾಕ್ಷಿ ಭಟ್ ಮತ್ತು ಮಾರ್ಗದರ್ಶನ ನೀಡಿದ ವಿದ್ವಾನ್ ಜಿ. ಎಸ್ .ಗಣಪತಿ ಭಟ್ ಅವರನ್ನು ಸಮಾರಂಭದಲ್ಲಿ ಅಭಿನಂದಿಸಲಾಯಿತು.ಗಣಪತಿ ದೇವಾಲಯದ ಖಜಾಂಚಿ ಪ್ರೊ. ಹರೀಶ್ ಕಲಾವಿದ ಮಕ್ಕಳಿಗೆ ಪಾರಿತೋಷಕಗಳನ್ನು ನೀಡಿ ಅಭಿನಂದಿಸಿದರು.

ಶ್ರೀ ಶಾರದ ಸಂಗೀತ ಕಲಾ ಕೇಂದ್ರದ ಮಕ್ಕಳಾದ ಮನಸ್ವಿ ಆರ್ .ಎಸ್., ಶ್ರೀಹಿತ .ಆರ್. ಎಸ್., ಶ್ರೀ ವಲ್ಲಿ ಕೆ.ಎ., ಶ್ರೀನಿಕ. ಕೆ.ಎ., ಇವರು ಹಾಡಿದ ಶಂಕರ ಸ್ತುತಿ ಪ್ರಾರ್ಥನೆಯೊಂದಿಗೆ ಆರಂಭವಾದ ಸಭೆಯಲ್ಲಿ ಉಮಾ ಬಿ.ಎಲ್., ಸ್ವಾಗತಿಸಿದರು. ವಿದ್ವಾನ್ ಅನಂತ ಕೃಷ್ಣ ವಂದಿಸಿದರು. ಶಶಿಧರ್ ಶ್ಯಾನುಭೋಗ್ ಕಾರ್ಯಕ್ರಮವನ್ನು ನಿರ್ವಹಿಸಿದರು.ಸಂಘದ 20ನೆಯ ಕಾರ್ಯಕ್ರಮವು ದಿನಾಂಕ 22.03.2025 ರ ಶನಿವಾರ ದಂದು ಸಂಜೆ 6 ಗಂಟೆಗೆ ಜೆಸಿಆರ್ ಗಣಪತಿ ದೇವಾಲಯದ ಸಭಾಂಗಣದಲ್ಲಿ ನಡೆಯಲಿದ್ದು. ಬೆಂಗಳೂರು ಇಸ್ರೋದಲ್ಲಿ ವಿಜ್ಞಾನಿಗಳಾಗಿರುವ ಶ್ರೀ ಜಯಸಿಂಹ ಮತ್ತು ಅವರ ಪತ್ನಿ ಶಿಕ್ಷಕಿ ಶ್ರೀಮತಿ ಸುಮಾ ದಂಪತಿಗಳು ಕುಮಾರವ್ಯಾಸ ಭಾರತದ ವಿಶ್ವರೂಪ ದರ್ಶನ ಪ್ರಸಂಗವನ್ನು ವಾಚನ ವ್ಯಾಖ್ಯಾನ ನಡೆಸಿಕೊಡಲಿದ್ದಾರೆಂದು ತಿಳಿಸಿದೆ.

## ಜನತಾಕಾಲೋನಿಯ ಹರಳಯ್ಯ ಮಠದಲ್ಲಿ ಶಿವರಾತ್ರಿ ಜಾಗರಣೆ ಉತ್ಸವ



» ಚಳ್ಳಕೆರೆ

ನಗರದ ಜನತಾಕಾಲೋನಿಯ ಮಹಾಶಿವಶರಣ ಹರಳಯ್ಯಮಠದಲ್ಲಿ ಪ್ರತಿವರ್ಷದಂತೆ ಈ ವರ್ಷವೂ ಫೆ.26ರ ಬುಧವಾರ ಮಹಾಶಿವರಾತ್ರಿ ವೈಭವದಿಂದ ಆಚರಿಸಲಾಗುವುದು ಎಂದು ಆಚರಣಾ ಸಮಿತಿ ಗೌರವಾಧ್ಯಕ್ಷ ಪುಟ್ಟಮ್ಮ ತಿಳಿಸಿದ್ದಾರೆ. ಅವರು, ಮಠದಲ್ಲಿ ಪೂರ್ವಭಾವಿ ಸಭೆ ನಡೆಸಿದ ಮಾತನಾಡಿ, ಕಾರ್ಯಕ್ರಮದಲ್ಲಿ ಸಿಂಧನೂರು ಅಂಬಾಮಠಸ್ವಾಮೀಜಿ ಪೂಜ್ಯಸಂಗೇಶ್ವರಶರಣರು ಆಗಮಿಸಿ ಆಶೀರ್ವಾದ ನೀಡುವರು. ಕ್ಷೇತ್ರದ ಶಾಸಕ ಟಿ.ರಘುಮೂರ್ತಿ, ಚಿತ್ರದುರ್ಗ ಶಾಸಕ ಕೆ.ಸಿ.ವೀರೇಂದ್ರ ಹಾಗೂ ವಿವಿಧ ಪಕ್ಷದ ಚುನಾಯಿತ ಮುಖಂಡರು ಆಗಮಿಸುವರು. ಫೆ.26ರ ಬುಧವಾರ ರಾತ್ರಿ ಶಿವನಾಮಸ್ಮರಣೆ, ಜಾಗರಣೆ, 27ರ ಗುರುವಾರ ಬೆಳಗ್ಗೆ 8ಕ್ಕೆ ಅನ್ನದಾಸೋಹ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ. ಭಕ್ತರು ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸುವಂತೆ ಮನವಿ ಮಾಡಿದ್ದಾರೆ. ಸಮಿತಿಯ ಪ್ರಧಾನ ಕಾರ್ಯದರ್ಶಿ ದುರುಗೇಶಪ್ಪ, ಸಹಕಾರ್ಯದರ್ಶಿಯಾದ ಓಬಳೇಶ್, ಬೋರೇಶ್, ಜಂಟಿಕಾರ್ಯದರ್ಶಿ ತಿಪ್ಪೇಸ್ವಾಮಿ, ಖಜಾಂಚಿ ಓಂಕಾರಮ್ಮ ಮುಂತಾದವರು ಸಭೆಯಲ್ಲಿ ಪಾಲ್ಗೊಂಡಿದ್ದರು.

## ಹೊಟ್ಟೆನೋವು ತಾಳದೆ ನೇಣು ಹಾಕಿಕೊಂಡು ಮೃತಪಟ್ಟ ಗೃಹಿಣಿ

» ಚಳ್ಳಕೆರೆ

ತಾಲ್ಲೂಕಿನ ಮೀರಸಾಬಿಹಳ್ಳಿ ಗ್ರಾಮದಲ್ಲಿ ಜಯಲಕ್ಷ್ಮಿ(29) ಎಂಬ ಗೃಹಿಣಿ ತನಗೆ ಕಾಣಿಸಿಕೊಳ್ಳುತ್ತಿದ್ದ ಹೊಟ್ಟೆನೋವು ತಾಳಲಾರದೆ ಸೋಮವಾರ ತಡರಾತ್ರಿ ತನ್ನ ಮನೆಯಲ್ಲಿ ನೇಣುಹಾಕಿಕೊಂಡು ಆತ್ಮಹತ್ಯೆ ಮಾಡಿಕೊಂಡಿರುತ್ತಾಳೆ. ಮೃತ ಜಯಲಕ್ಷ್ಮಿ ತಾಯಿ ಅಂಜಿನಮ್ಮ ಈ ಬಗ್ಗೆ ಪೊಲೀಸರಿಗೆ ದೂರು ನೀಡಿ, ನನ್ನ ಮಗಳನ್ನು ಮೀರಸಾಬಿಹಳ್ಳಿ ಗ್ರಾಮದ ಪ್ರಹ್ಲಾದ್ ಎಂಬುವವನಿಗೆ ಹತ್ತು ವರ್ಷಗಳ ಹಿಂದೆ ಮದುವೆ ಮಾಡಿಕೊಡಲಾಗಿತ್ತು. ಆಗಾಗ ಬರುತ್ತಿದ್ದ ಹೊಟ್ಟೆನೋವನ್ನು ತಾಳದೆ ಆತ್ಮಹತ್ಯೆಗೆ ಶರಣಾಗಿರುತ್ತಾಳೆ. ಎಸ್ಐಎಸ್ ನಾಗೇಂದ್ರಪ್ಪ ಪ್ರಕರಣ ದಾಖಲಿಸಿ ತನಿಖೆ ನಡೆಸುತ್ತಿದ್ದಾರೆ.

## ಗೌರಸಮುದ್ರ ತುಮಲು ಅಕ್ರಮ ಸೇಂದಿ ಸಾಗಾಟ ಮಾಡುತ್ತಿದ್ದ ಇಬ್ಬರ ವ್ಯಕ್ತಿಗಳ ವಿರುದ್ಧ ಪ್ರಕರಣ

ಚಳ್ಳಕೆರೆ: ತಾಲ್ಲೂಕಿನ ತಳಕು ಹೋಬಳಿಯ ಗೌರಸಮುದ್ರ ತುಮಲು ಮೂಲಕ ಆಂಧ್ರ ಪ್ರದೇಶದ ತಾಳಿಕೆರೆಗೆ ದ್ವಿಚಕ್ರವಾಹನದಲ್ಲಿ ಅಕ್ರಮ ಸೇಂದಿ ಸಾಗಾಟ ಮಾಡುತ್ತಿದ್ದು, ಮಾಹಿತಿ ಪಡೆದ ಅಬಕಾರಿ ಇಲಾಖೆ ಅಧಿಕಾರಿಗಳು ವಾಹನ ಸಮೇತ ಆರೋಪಿಗಳನ್ನು ವಶಕ್ಕೆ ಪಡೆದಿದ್ದಾರೆ. ಅಬಕಾರಿ ನಿರೀಕ್ಷಕ ಸಿ.ನಾಗರಾಜು ಮತ್ತು ತಂಡ ಅಬಕಾರಿ ಆಯುಕ್ತರ ಆದೇಶದಂತೆ ಮಂಗಳವಾರ ಬೆಳಗ್ಗೆ ಸಾರ್ವಜನಿಕರ ಮಾಹಿತಿ ಮೇರೆಗೆ ಗೌರಸಮುದ್ರದ ತುಮಲು ಪ್ರದೇಶಕ್ಕೆ ಭೇಟಿ ನೀಡಿದ ಸಂದರ್ಭದಲ್ಲಿ ಇಬ್ಬರು ವ್ಯಕ್ತಿಗಳು ತಮ್ಮ ಮೋಟಾರ್ ಬೈಕ್‌ನಲ್ಲಿ ಅಕ್ರಮವಾಗಿ ಸೇಂದಿಯನ್ನು ಸಾಗಾಟ ಮಾಡುತ್ತಿದ್ದು ಅವರನ್ನು ವಶಕ್ಕೆ ಪಡೆಯಲಾಗಿದೆ ಎಂದರು. ವಶಪಡಿಸಿಕೊಂಡ ಅಕ್ರಮ ಸೇಂದಿ ಹಾಗೂ ವಾಹನ ಸೇರಿ ಸುಮಾರು 61 ಸಾವಿರ ಮೌಲ್ಯದ್ದು ಎನ್ನಲಾಗಿದೆ. ಅಬಕಾರಿ ಉಪನಿರೀಕ್ಷಕ ಟಿ.ರಂಗಸ್ವಾಮಿ, ಡಿ.ಟಿ.ತಿಪ್ಪಯ್ಯ, ಮುಖ್ಯಪೇದೆ ಮಂಜುಳಾ, ಸೋಮಶೇಕರ್, ಪೇದೆಗಳಾದ ಸಿ.ದರ್ಶನ್‌ಕುಮಾರ್, ನವನೀತ್ ಮುಂತಾದವರು ಕಾರ್ಯಚರಣೆಯಲ್ಲಿ ಪಾಲ್ಗೊಂಡಿದ್ದರು.

## ಪ್ರಮುಖ ಸುದ್ದಿ

### ಆಡಳಿತ ನಡೆಸುವವರು, ಆಡಳಿತ ಮಾಡುವವರು ಇಬ್ಬರೂ ಮಾನ ಮರ್ಯಾದೆ ಇಟ್ಟುಕೊಂಡು ಕೆಲಸ ಮಾಡಿ

# ಪುರಸಭೆಗೆ ಗೌರವ ತರುವ ಕೆಲಸ ಮಾಡಿ,ಇಲ್ಲದಿದ್ದರೆ ಜಾಗ ಖಾಲಿ ಮಾಡಿ

» ಹೊಸದುರ್ಗ

ಹಲವು ವರ್ಷಗಳಿಂದ ಅನಧಿಕೃತವಾಗಿ ನಿರ್ಮಾಣ ಮಾಡಿಕೊಂಡಿದ್ದ ಬಡಾವಣೆಗಳಿಗೆ ಯಾವುದೇ ದಾಖಲೆಯಿಲ್ಲದೆ ಜನ ಅಸಹಾಯಕರಾಗಿದ್ದರು ಇದನ್ನು ಮನಗಂಡ ನಮ್ಮ ಸರ್ಕಾರ ದುಪ್ಪಟ್ಟು ಕಂದಾಯ ಕಟ್ಟಿಸಿಕೊಳ್ಳುವ ಮೂಲಕ ಅಂತಹ ನಿವೇಶನಗಳಿಗೆ ಬಿ ಖಾತಾ ದಾಖಲೆ ನೀಡಲು ಅನುಕೂಲ ಮಾಡಿಕೊಟ್ಟಿದೆ ಸರ್ಕಾರದ ನಿರ್ದೇಶನದಂತೆ ಮೂರು ತಿಂಗಳೊಳಗಾಗಿ ಎಲ್ಲಾ ಹಿನ್ನಲೆಯಲ್ಲಿ ನಿವೇಶನಗಳಿಗೂ ದಾಖಲೆ ನೀಡಬೇಕು ಎಂದು ಶಾಸಕ ಬಿ.ಜಿ.ಗೋವಿಂದಪ್ಪ ಪುರಸಭಾ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಪಟ್ಟಣದ ಪುರಸಭೆಯಲ್ಲಿ ಸೋಮವಾರ ಆಯೋಜಿಸಲಾಗಿದ್ದ ಇ ಖಾತಾ ಸಹಾಯವಾಣಿ ಕೇಂದ್ರಕ್ಕೆ ಚಾಲನೆ ನೀಡಿ ನಂತರ ಪೋಸ್ಟರ್ ಬಿಡುಗಡೆ ಮಾಡಿ ಮಾತನಾಡಿದ ಅವರು ಪುರಸಭೆ ಕಂದಾಯ ಇಲಾಕೆ ಅಧಿಕಾರಿ ಯೋಗೀಶ್‌ಗೆ ನಿನ್ನ ಮೇಲೆ ತುಂಬಾ ದೂರುಗಳಿವೆ. ಸರಿಯಾಗಿ



ಕೆಲಸ ಮಾಡು.ಪುರಸಭೆಗೆ ಗೌರವ ತರುವ ಕೆಲಸ ಮಾಡು ಇಲ್ಲದಿದ್ದರೆ ಇಲ್ಲಿಂದ ಜಾಗ ಖಾಲಿ ಮಾಡು ಎಂದು ಎಚ್ಚರಿಕೆ ನೀಡಿದರು.

ಹೊಸದುರ್ಗ ಪುರಸಭೆಗೆ ಮರ್ಯಾದೆ ಇಲ್ಲ. ಅಡ್ಡದಾರಿ ತೋರಿಸುವ ಜನರ ಜೊತೆ ಸಾರ್ವಜನಿಕರು ಹೋಗಬೇಡಿ.ಸರಕಾರದ ಮಾನನನ್ನಮಾನಹರಾಜುಹಾಕುತ್ತಿದ್ದೀರಾ, ನಿಮ್ಮ ಜೇಬು ತುಂಬಿಸಿಕೊಂಡು ಹೋಗ್ತಾ ಇದ್ದೀರಾ.

ಸಾರ್ವಜನಿಕರಿಂದ ಯಾವುದಾದರು ಸಣ್ಣ ದೂರು ಬಂದರೂ ಸಹಾ ನಿಮ್ಮೆಲ್ಲಾ ಗ್ರಹಚಾರ ಬಿಡಿಸುತ್ತೇನೆ ಎಂದು ಶಾಸಕರು ಪುರಸಭಾ ಆಡಳಿತದ ವಿರುದ್ಧ ಆಕ್ರೋಶ ವ್ಯಕ್ತ ಪಡಿಸಿದರು.

ಪಟ್ಟಣದಲ್ಲಿ 6 ಸಾವಿರ ಬಿ ಖಾತಾ ಆಸ್ತಿಗಳಿದ್ದು ಪುರಸಭೆ ವ್ಯಾಪ್ತಿಯ ಆಸ್ತಿ ಮಾಲಿಕರು ದಾಖಲೆ ಸಲ್ಲಿಸಿ ಬಿ ಖಾತಾ ಪಡೆದುಕೊಳ್ಳಿ ಎಂದ ಶಾಸಕರು ನಾನು ಇಲ್ಲಿ ಭಾಷಣ ಮಾಡಲು ಬಂದಿಲ್ಲ ನನಗೆ ಯಾರ ಭಯವೂ ಇಲ್ಲ ಅಧಿಕಾರಿಗಳು ಮದ್ಯವರ್ತಿಗಳಿಗೆ ಬೆಂಬಲ ಕೊಟ್ಟರೆ ನಾನು ಸಹಿಸುವುದಿಲ್ಲ ನೀವು ಸರ್ಕಾರದ ಮಾನ ನನ್ನ ಮಾನ ಹರಾಜು ಹಾಕುತ್ತಿದ್ದೀರಾ, ನಿಮ್ಮ ಜೇಬು ತುಂಬಿಸಿಕೊಂಡು ಹೋಗ್ತಾ ಇದ್ದೀರಾ ಇದನ್ನೆಲ್ಲಾ ಇಲ್ಲಿಗೆ ಕೈಬಿಡಿ ಆಡಳಿತ ನಡೆಸುವವರು, ಆಡಳಿತ ಮಾಡುವವರು ಇಬ್ಬರೂ ಮಾನ ಮರ್ಯಾದೆ ಇಟ್ಟುಕೊಂಡು ಕೆಲಸ ಮಾಡಿ ಎಂದು ಎಚ್ಚರಿಸಿದರು.

ಕಾರ್ಯಕ್ರಮದಲ್ಲಿ ಪುರಸಭೆ ಅಧ್ಯಕ್ಷೆ ರಾಜೇಶ್ವರಿಆನಂದ್, ಸದಸ್ಯರಾದ ಡಾ. ಸ್ವಾತಿ ಪ್ರದೀಪ್, ಸರೋಜಮ್ಮ, ಶ್ರೀನಿವಾಸ್, ಜಾಫರ್ ಸಾಧಿಕ್, ಶಂಕರಪ್ಪ, ಬ್ರಹ್ಮಪಾಲ್, ನಾಗರಾಜ್, ಮಂಜುನಾಥ್, ರಮೇಶ್, ಗೌಡ್ರು ತಿಪ್ಪೇಸ್ವಾಮಿ, ಮುಖ್ಯಾಧಿಕಾರಿ ತಿಮ್ಮರಾಜು, ಮುಖಂಡರಾದ ಆಗ್ರೋ ಶಿವಣ್ಣ, ಕೆ ಸಿ ನಿಂಗಪ್ಪ ಜಿಲ್ಲಾ ಕೆಡಿಪಿ ಸದಸ್ಯೆ ಶ್ರೀಮತಿದೀಪಿಕಾಸತೀಶ್, ವ್ಹಹಲಿಂಗಪ್ಪ, ಚಂದ್ರಶೇಖರ್ ಮತ್ತಿತರರಿದ್ದರು.

## ಫಾಸ್ಟ್ ನ್ಯೂಸ್

### ವಿದ್ಯುತ್ ಸಮಸ್ಯೆ ಖಂಡಿಸಿ ಗ್ರಾಮಸ್ಥರಿಂದ ಪ್ರತಿಭಟನೆ



» ಮೊದಲ ಪುಟದಿಂದ

ಬೆಸ್ಕಾಂ ಇಲಾಖೆಯ ಎಸ್ ಓ ಶಿವಕುಮಾರ್ ಸ್ಥಳಕ್ಕೆ ಭೇಟಿ ನೀಡಿ ಈ ವೇಳೆಯಲ್ಲಿ ಮಾತನಾಡಿ, ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಾಸವಾಗುವುದನ್ನ ಗಮನಿಸಿ ಮುಂದಿನ ದಿನಗಳಲ್ಲಿ ಸರಿಪಡಿಸುವುದರ ಜತೆ ಸಮಸ್ಯೆಯನ್ನು ಮೇಲಾಧಿಕಾರಿಗಳ ಗಮನಕ್ಕೂ ತರಲಾಗುವುದು ಎಂದು ತಿಳಿಸಿದರು. ಸಂದರ್ಭದಲ್ಲಿ ಪಿಎಸ್ಐ ಮಾರುತಿ, ಪಿಎಲ್‌ಡಿ ಮಾಜಿ ಅಧ್ಯಕ್ಷ ಜಜ್ಜೀರಪ್ಪ, ಸತ್ಯನಾರಾಯಣ ಸ್ವಾಮಿ, ಸಣ್ಣಪ್ಪ ಶಿವಣ್ಣ, ಯೋಗರಾಜ್ , ಹನುಮಂತರಾಯ, ಬಾಬು, ದಿವಾಕರು, ತಿಮ್ಮರಾಜು, ರಾಘವೇಂದ್ರ, ಪ್ರಶಾಂತ್ ನಾಯಕ, ನರಸಿಂಹ ಮೂರ್ತಿ, ಶಶಿಧರ್ ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು.

### ಎಂಇಎಸ್ ಪುಂಡರ ಹಾವಳಿ ವಿರುದ್ಧ ಕಾನೂನು ಕ್ರಮಕ್ಕೆ ಆಗ್ರಹ




» ಮೊದಲ ಪುಟದಿಂದ

ಬೆಳಗಾವಿ ಗಡಿಯಲ್ಲಿ ಕನ್ನಡಿಗರ ಮೇಲೆ ಪದೇಪದೇ ಹಲ್ಲೆ, ದೌರ್ಜನ್ಯ ಮಾಡುತ್ತಿರುವ ಮಹಾರಾಷ್ಟ್ರ ಏಕೀಕರಣ ಸಮಿತಿಯನ್ನು ರದ್ದುಪಡಿಸಬೇಕು. ಕನ್ನಡದಲ್ಲಿ ಮಾತನಾಡಿರುವ ಬಸ್ ಕಂಡಕ್ಟರ್ ಮೇಲೆ ಹಲ್ಲೆ ಮಾಡಿರುವ ಮರಾಠಿ ಪುಂಡರನ್ನು ಕೂಡಲೇ ಬಂಧಿಸಬೇಕು. ದುರುದ್ದೇಶವಾಗಿ ಕಂಡಕ್ಟರ್ ಮೇಲೆ ಪೋಸ್ಕೋ ಕಾಯಿದೆ ದಾಖಲು ಮಾಡಿರುವುದು ರದ್ದುಪಡಿಸಬೇಕು ಎಂದರು.

ತಹಶೀಲ್ದಾರ್ ಪರವಾಗಿ ಮನವಿ ಸ್ವೀಕರಿಸಿದ ಶಿರಸ್ತೇದಾರ್ ಸದಾಶಿವಪ್ಪ, ತಮ್ಮ ಮನವಿಯನ್ನು ಜಿಲ್ಲಾಧಿಕಾರಿಗಳಮೂಲಕ ಮಾನ್ಯಮುಖ್ಯಮಂತ್ರಿಗಳ ಕಚೇರಿಗೆ ಕಳಿಸುವ ಭರವಸೆ ನೀಡಿದರು. ಈ ಸಂದರ್ಭದಲ್ಲಿ ಪಗಡಲಬಂಡೆ ನಾಗೇಂದ್ರಪ್ಪ, ಮೂಡಲಗಿರಿಯಪ್ಪ, ಮಂಜುನಾಥ, ಸತೀಶ್, ವೀರೇಂದ್ರ, ಶಂಕರ್, ನಾಗರಾಜು, ಜ್ಯೋತಿಲಕ್ಷ್ಮಿ, ಅನು, ಮಂಜಮ್ಮ ಮುಂತಾದವರು ಉಪಸ್ಥಿತರಿದ್ದರು.

### ಮಹಾಶಿವರಾತ್ರಿ ಹಿನ್ನೆಲೆ ಮಾಂಸ ಮಾರಾಟ ನಿಷೇದ: ಪೌರಾಯುಕ್ತ

» ಚಳ್ಳಕೆರೆ

ಮಹಾಶಿವರಾತ್ರಿ ಹಬ್ಬದ ಪ್ರಯುಕ್ತ ಫೆ.26ರ ಬುಧವಾರ ಬೆಳಗ್ಗೆಯಿಂದ ಸಂಜೆವರೆಗೂ ಮಾಂಸ ಹಾಗೂ ಚಿಕನ್ ಮಾರಾಟವನ್ನು ನಿಷೇದಿಸಿದ್ದು, ಎಲ್ಲಾ ಅಂಗಡಿ ಮಾಲೀಕರು ಕಡ್ಡಾಯವಾಗಿ ತಮ್ಮ ಅಂಗಡಿಗಳನ್ನು ಬಂದ್ ಮಾಡಬೇಕೆಂದು ಪೌರಾಯುಕ್ತಎಚ್.ಜಿ.ಜಗರೆಡ್ಡಿಸೂಚನೆನೀಡಿದ್ದಾರೆ. ಪ್ರತಿವರ್ಷ ಮಹಾಶಿವರಾತ್ರಿ ಹಬ್ಬದ ಹಿನ್ನೆಲೆಯಲ್ಲಿ ಮಾಂಸ ಮಾರಾಟ ನಿಷೇದ ಮಾಡಿದ್ದು, ಜಿಲ್ಲಾಧಿಕಾರಿಗಳ ಸೂಚನೆಯಂತೆ ನಗರದ ಎಲ್ಲಾ ಮಾಂಸದ ಅಂಗಡಿ ಮಾರಾಟಗಾರರಿಗೆ ಸೂಚನೆ ನೀಡಿದ್ದು, ಯಾರಾದರೂ ಬಾಗಿಲು ತೆರೆದು ವ್ಯಾಪಾರಕ್ಕೆ ಯತ್ನಿಸಿದಲ್ಲಿ ಅಂತಹವರ ವಿರುದ್ಧ ಕಾನೂನು ಕ್ರಮ ಜರುಗಿಸಲಾಗುವುದು ಎಂದು ತಿಳಿಸಿದ್ದಾರೆ.

### ಇಂದಿನಿಂದ ಬಸವೇಶ್ವರಸ್ವಾಮಿ ಜಾತ್ರೆ



» ಚಿತ್ರದುರ್ಗ

ಹೊಳಲ್ಕೆರೆ ತಾಲ್ಲೂಕು ತಾಳ್ಯ ಹೋಬಳಿಯ ಬ್ರಹ್ಮಪುರ(ದಗ್ಗೆ) ದಲ್ಲಿ ಫೆ.26 ರಿಂದ ಮಾ.1 ರವರೆಗೆ ಬಸವೇಶ್ವರಸ್ವಾಮಿ ಜಾತ್ರಾ ಮಹೋತ್ಸವ ನಡೆಯಲಿದೆ. ಬುಧವಾರ ರಾತ್ರಿ ಹತ್ತು ಗಂಟೆಯಿಂದ ಬಸವೇಶ್ವರಸ್ವಾಮಿಯ ಮಹಾಶಿವರಾತ್ರಿ ಜಾಗರಣೆ ಮತ್ತು ಅಭಿಷೇಕ 101 ಪೂಜೆಗಳು.27 ರಂದು ಬೆಳಿಗ್ಗೆ ಐದು ಗಂಟೆಯಿಂದ ಗಂಗಾಪೂಜೆ, ಧ್ವಜಾರೋಹಣ, ಕಂಕಣಧಾರಣೆ ಮತ್ತು ಉತ್ಸವಗಳು.28 ರಂದು ಸ್ವಾಮಿಯ ಗುಗ್ಗಳ ಸೇವೆ. ಬೆಳಿಗ್ಗೆ 10-30 ಕ್ಕೆ ಕೆಂಡದಾರ್ಚನೆ ಮತ್ತು ಕತ್ತಿ ಪವಾಡ. ಸಂಜೆ ಆರು ಗಂಟೆಗೆ ಧೂಳು ಉತ್ಸವ, ರಾತ್ರಿ 8 ಗಂಟೆಯಿಂದ ಹೂವಿನ ಪಲ್ಲಕ್ಕಿ ಉತ್ಸವ ಜರುಗಲಿದೆ. ಮಧ್ಯಾಹ್ನ 12-30 ರಿಂದ ಅನ್ನಸಂತರ್ಪಣೆ. ಮಾ.1 ರಂದು ಮಧ್ಯಾಹ್ನ 12 ಗಂಟೆಗೆ ಓಕಳಿ, 1 ಗಂಟೆಗೆ ಶನಿ ಮಹಾತ್ಮೆ ಪುರಾಣ. ರಾತ್ರಿ 9 ಕ್ಕೆ ಕಾಶಿಕಡಲೆ. ನಂತರ ರಸಮಂಜರಿ ಕಾರ್ಯಕ್ರಮವಿರುತ್ತದೆ.ಭಕ್ತಾಧಿಗಳು ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸುವಂತೆ ದೇವಸ್ಥಾನ ಜಾತ್ರಾ ಸಮಿತಿ ಅಧ್ಯಕ್ಷ ಮಿಲ್ಟ್ರಿ ನಾಗರಾಜ್ ಮನವಿ ಮಾಡಿದ್ದಾರೆ.

# ಸಂವಿಧಾನ ರಕ್ಷಣಾ ಪಡೆಗೆ ಸೇರ್ಪಡೆಯಾಗೋಣ ಬನ್ನಿ

» ಚಿತ್ರದುರ್ಗ




ಭಾರತದ ಪ್ರತಿಯೊಬ್ಬ ಪ್ರಜೆಗಳನ್ನು ರಕ್ಷಣೆ ಮಾಡುವ ಸಂವಿಧಾನಕ್ಕೆ ಅಪಾಯವಾದರೆ ಜನಸಾಮಾನ್ಯರ ಪಾಡೇನು? ಈ ಕುರಿತು ಬುದ್ದಿ ಜೀವಿಗಳು, ಪ್ರಜ್ಞಾವಂತರು ಚಿಂತಿಸಬೇಕಿದೆ ಎಂದು ಸಾಮಾಜಿಕ ಚಿಂತಕ ಜೆ.ಯಾದವರೆಡ್ಡಿ ನುಡಿದರು.

ಪತ್ರಕರ್ತರ ಭವನದಲ್ಲಿ ಮಂಗಳವಾರ ಹಮ್ಮಿಕೊಳ್ಳಲಾಗಿದ್ದ ಸಂವಿಧಾನ ಯಾನ ದೇಶ ರಕ್ಷಣೆಯ ಹೊಣೆ ನಮ್ಮದಾಗಿಸಿಕೊಳ್ಳೋಣ ಬನ್ನಿ ಸಂವಿಧಾನ ರಕ್ಷಣಾ ಪಡೆಗೆ ಸೇರ್ಪಡೆಯಾಗೋಣ ಬನ್ನಿ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದರು.

ಸಂವಿಧಾನಕ್ಕೆ 140 ವರ್ಷಗಳ ಶಕ್ತಿಯಿದೆ. ಯಾರ ಸ್ವತ್ತಲ್ಲ. ಸಂವಿಧಾನ ಆಶಯಗಳಿಗೆ ವಿರುದ್ದವಾದ ಘಟನೆಗಳು ನಡೆಯುತ್ತಿರುವುದನ್ನು ಪ್ರಶ್ನಿಸಿದರೆ ಸಾಯಿಸುತ್ತಾರೆ ಇಲ್ಲ ಜೈಲಿಗೆ ಕಳಿಸುತ್ತಾರೆ. ಶಬರಿಮಲೈಗೆ ಮಹಿಳೆಯೊಬ್ಬರು ಪ್ರವೇಶಿಸಿದ ವಿಚಾರಕ್ಕೆ ಸಂಬಂಧಿಸಿದಂತೆ ಸುಪ್ರೀಂಕೋರ್ಟ್ ಕೊಟ್ಟ ತೀರ್ಪನ್ನು ಕೇಂದ್ರ ಸರ್ಕಾರ ಸ್ವಾಗತಿಸಬೇಕಿತ್ತು. ಗೃಹ ಸಚಿವ ಅಮಿತ್‌ಷಾ ಗೇಲಿ ಮಾಡಿದರು. ಆಗ ನಿಜವಾಗಿಯೂ ಅವರ ಮೇಲೆ ನ್ಯಾಯಾಂಗ ನಿಂದನೆ ಕೇಸು ದಾಖಲಿಸಬೇಕಿತ್ತು. ಡಾ.ಬಿ.ಆರ್.ಅಂಬೇಡ್ಕರ್ ಬಗ್ಗೆ ಹಗುರವಾಗಿ ಮಾತನಾಡಿದಾಗ ದೇಶದ ಪ್ರಧಾನಿ ಸಮರ್ಥಿಸಿಕೊಂಡರು. ಇವೆಲ್ಲವನ್ನು ಗಮನಿಸಿದಾಗ ಸಂವಿಧಾನಕ್ಕೆ ಗಂಡಾಂತರವಿದೆ ಎನ್ನುವುದು ಗೊತ್ತಾಗುತ್ತದೆಂದು ಹೇಳಿದರು.

ಸಂವಿಧಾನದ ಗೆರೆಯನ್ನು ದಾಟಿದ ಪ್ರಧಾನಿ ಇಂದಿರಾಗಾಂಧಿಗೆ ಯಾವ ಸ್ಥಿತಿಯಾಯಿತು ಎನ್ನುವುದನ್ನು ಈಗಿನ ಪ್ರಧಾನಿ ಮೋದಿ ಅರ್ಥಮಾಡಿಕೊಂಡು ಸಂವಿಧಾನವನ್ನು ಗೌರವಿಸಬೇಕು. ಗೌರಿ ಲಂಕೇಶ್, ಎಂ.ಎಂ.ಕಲುಬುರ್ಗಿ ಇವರುಗಳನ್ನು ಹತ್ಯೆಗೈದ ಹಂತಕರನ್ನು ಇನ್ನು ಪತ್ತೆ ಹಚ್ಚಲು ಆಗಿಲ್ಲ. ಸಂವಿಧಾನ ದೊಡ್ಡದು. ಕೇಂದ್ರ ಸರ್ಕಾರ ರಿಸರ್ವ್ ಬ್ಯಾಂಕ್, ಚುನಾವಣಾ ಆಯೋಗಕ್ಕೆ ಕೈಹಾಕುತ್ತಿದೆ. ಚುನಾವಣಾ ಪ್ರಕ್ರಿಯೆ ಕುಲಗೆಟ್ಟಿದೆ. ಒಕ್ಕೂಟದ ವ್ಯವಸ್ಥೆ ನಾಶವಾಗುತ್ತಿದೆ. ಹಿಂದಿ ಹೇರಿಕೆ ಅಕ್ಷಮ್ಯ ಅಪರಾಧ.

ಬಹುತ್ವ, ಸಾಮರಸ್ಯ, ಸಹಬಾಳ್ವೆಯನ್ನು ಕೆಡಿಸುವ ಕೆಲಸವಾಗುತ್ತಿದೆ ಎಂದು ವಿಷಾಧಿಸಿದರು.

ವಕೀಲರ ಸಂಘದ ಅಧ್ಯಕ್ಷ ವೈ.ತಿಪ್ಪೇಸ್ವಾಮಿ ಮಾತನಾಡಿ ಸಂವಿಧಾನವನ್ನು ಪೂರ್ಣವಾಗಿ ಅಧ್ಯಯನ ಮಾಡಿದ್ದೇವಾ ಎನ್ನುವುದನ್ನು ವಕೀಲರಿಂದ ಹಿಡಿದು ಪ್ರತಿಯೊಬ್ಬರು ಆತ್ಮಾವಲೋಕನ ಮಾಡಿಕೊಳ್ಳುವ ಕಾಲದಲ್ಲಿವೆ. ಅಕ್ಷರಜ್ಞಾನವುಳ್ಳ ಪ್ರತಿಯೊಬ್ಬ ನಾಗರೀಕನು ಇದನ್ನು ಅರ್ಥಮಾಡಿಕೊಳ್ಳಬೇಕು. ಜಸ್ಟಿಸ್ ನಾಗಮೋಹನ್‌ದಾಸ್ ಸಂವಿಧಾನವನ್ನು ಎಲ್ಲರೂ ಓದಬೇಕೆಂದು ಹೇಳಿದ್ದಾರೆ. ಅದರ ಪ್ರಕಾರ ಸಂವಿಧಾನ ತಿಳಿದುಕೊಂಡರೆ ಮಾತ್ರ ದೇಶ ಸುರಕ್ಷಿತವಾಗಿರಲು ಸಾಧ್ಯ ಎಂದರು.

ದೇಶ ಮತ್ತು ಸಂವಿಧಾನವನ್ನು ರಕ್ಷಿಸಬೇಕಿದೆ. ಸಂವಿಧಾನಕ್ಕೆ ಅಪಚಾರವಾದಾಗ ಕಾನೂನು ಉಲ್ಲಂಘನೆಯಾದಂತಾಗುತ್ತದೆ. ಸಂಘಟನೆ, ಶಕ್ತಿ, ಸಹಕಾರದಿಂದ ಮಾತ್ರ ಸಂವಿಧಾನ ಉಳಿಸಬಹುದು. ಸಂವಿಧಾನಕ್ಕೆ ಕೆಟ್ಟದಾಗುತ್ತಿದೆಯೆನ್ನುವುದನ್ನು ಕೇಳಿಸಿಕೊಂಡರೆ ಪ್ರತಿಭಟಿಸದೆ ಸುಮ್ಮನಿರುವುದು ಹೇಡಿತನ ಎಂದು ವ್ಯಂಗ್ಯವಾಡಿದರು.

ಹಿರಿಯ ನ್ಯಾಯವಾದಿ ಬಿ.ಕೆ.ರಹಮತ್‌ವುಲ್ಲಾ ಮಾತನಾಡುತ್ತ ಭಾರತವನ್ನು ನೂರಾರು ವರ್ಷಗಳ ಕಾಲ ಬ್ರಿಟೀಷರು ಆಳಿದರು. ಸತ್ಯ ಮತ್ತು ಅಹಿಂಸೆಯನ್ನು ಅಸ್ತ್ರವಾಗಿಟ್ಟುಕೊಂಡು ಗಾಂಧಿ ಬ್ರಿಟಿಷರ ವಿರುದ್ದ ಹೋರಾಡಿ ದೇಶಕ್ಕೆ ಸ್ವಾತಂತ್ರ್ಯ ತಂದು ಕೊಟ್ಟರು. ಇದರ ಹಿಂದೆ ಅನೇಕ ಮಹನೀಯರ ತ್ಯಾಗ ಬಲಿದಾನವಿದೆ. ದುರಂತವೆಂದರೆ ನಮ್ಮವರೆ ಗಾಂಧಿಯನ್ನು ಕೊಂದಿದ್ದು, ಎಂದರು.

ಇಂದಿರಾಗಾಂಧಿ, ರಾಜೀವ್‌ಗಾಂಧಿ ಹತ್ಯೆಯಾಯಿತು. ಬಲ್ಕಿಸ್‌ಭಾನು ಅತ್ಯಾಚಾರ ಪ್ರಕರಣಕ್ಕೆ ಸಂಬಂಧಿಸಿದಂತೆ ಗುಜರಾತ್ ಸೆಷನ್ಸ್ ನ್ಯಾಯಾಲಯ ಹನ್ನೊಂದು ಆರೋಪಿಗಳಿಗೆ ಸಜೆ ನೀಡಿದ್ದನ್ನು ಹೈಕೋಟ್ ಮತ್ತು ಸುಪ್ರೀಂಕೋರ್ಟ್ ಎತ್ತಿ ಹಿಡಿಯಿತು. ಆಗ ಕೇಂದ್ರ ಸರ್ಕಾರ ರಾಷ್ಟ್ರಪತಿಗೆ ಪತ್ರ ಬರೆದ ಪರಿಣಾಮ ಎಲ್ಲರನ್ನು ಖುಲಾಸೆಗೊಳಿಸಿತು. ಇದನ್ನು ನೋಡಿದರೆ ಸಂವಿಧಾನ ಇದೆಯೋ ಇಲ್ಲವೋ ಎನ್ನುವ ಜಿಜ್ಞಾಸೆ ಕಾಡುತ್ತದೆ ಎಂದು ಹೇಳಿದರು.

ಕೇಂದ್ರ ಸರ್ಕಾರ ಕಾನೂನನ್ನೆ ಕೈಗೆ ತೆಗೆದುಕೊಳ್ಳುವುದಾದರೆ ಸಂವಿಧಾನ ಕಾನೂನು ಏಕೆ ಇರಬೇಕು? ಕೇಶವಾನಂದಭಾರತಿರವರ ತೀರ್ಪು ಎತ್ತಿ ಹಿಡಿದು ಸಂವಿಧಾನ ರಕ್ಷಿಸಬೇಕಿದೆ. ಬಾಬ್ರಿ ಮಸೀದಿ ಧ್ವಂಸಕ್ಕೆ ಸಂಬಂಧಿಸಿದಂತೆ ಫುಲ್‌ಬೆಂಚ್ ನ್ಯಾಯ ಪೀಠದಲ್ಲಿ ಒಬ್ಬೊಬ್ಬರು ಒಂದೊಂದು ರೀತಿಯ ತೀರ್ಪು ನೀಡಿರುವುದನ್ನು ನೋಡಿದರೆ ಸಂವಿಧಾನ ಅಪಾಯದಲ್ಲಿದೆ ಎನ್ನುವುದು ಗೊತ್ತಾಗುತ್ತದೆ ಎಂದು ತಿಳಿಸಿದರು.

ನ್ಯಾಯವಾದಿ ಸಿ.ಶಿವುಯಾದವ್ ಮಾತನಾಡಿ ಸಂವಿಧಾನದ ಮೇಲೆ ಯಾರೆ ದಬ್ಬಾಳಿಕೆ ದೌರ್ಜನ್ಯವೆಸಗಿದರೆ ಎಲ್ಲರೂ ಪ್ರತಿಭಟಿಸಬೇಕು. ಸಂವಿಧಾನವನ್ನು ಬದಲಾಯಿಸುತ್ತೇವೆನ್ನುವುದೇ ಸಂವಿಧಾನ ವಿರೋಧಿ ಕೃತ್ಯ. ಸುಪ್ರೀಂಕೋರ್ಟ್‌ನ್ನು ಸರ್ಕಾರ ತನ್ನ ಹಿಡಿದಲ್ಲಿಟ್ಟುಕೊಳ್ಳುವ ಪ್ರಯತ್ನ ಮಾಡುತ್ತಿದೆಯೆಂದು ಬುದ್ದಿವಂತರು ಚಿಂತಕರು ಹಾದಿ ಬೀದಿಯಲ್ಲಿ ಚರ್ಚೆ ಮಾಡುತ್ತಿದ್ದಾರೆ. ಸಂವಿಧಾನವನ್ನು ತಿದ್ದುಪಡಿಗೊಳಿಸಿ ಬದಲಾಯಿಸುತ್ತೇವೆನ್ನುವುದೇ ಅಪರಾಧ ಎಂದು ಹೇಳಿದರು.

ನ್ಯಾಯವಾದಿ ಬೀಸ್ನಳ್ಳಿ ಜಯಣ್ಣ ಮಾತನಾಡುತ್ತ ದೇಶದ ಪ್ರತಿಯೊಬ್ಬರಿಗೂ ಸಮಾನತೆ ನೀಡಿರುವ ಸಂವಿಧಾನವನ್ನು ಬದಲಾವಣೆ ಮಾಡುತ್ತೇವೆಂದು ಮನುವಾದಿಗಳು ಹೇಳುತ್ತಿದ್ದಾರೆ. ರಕ್ಷಣೆ ಮಾಡುವ ಕೆಲಸವಾಗಬೇಕು. ದೇವರು, ಧರ್ಮ, ಜಾತಿ ಹೆಸರಿನಲ್ಲಿ ದಬ್ಬಾಳಿಕೆ ನಡೆಯುತ್ತಿದೆ. ಸಂವಿಧಾನ ಉಳಿದರೆ ಬದುಕು ಉಳಿಯುತ್ತದೆ. ಇಲ್ಲದಿದ್ದರೆ ಪ್ರಜಾಪ್ರಭುತ್ವದ ಮೌಲ್ಯಗಳು ನಾಶವಾಗುವುದರಲ್ಲಿ ಅನುಮಾನವಿಲ್ಲ ಎಂದರು.

ಭೂಮಿ ಮತ್ತು ವಸತಿ ಹಕ್ಕು ವಂಚಿತರ ಹೋರಾಟ ಸಮಿತಿ ರಾಜ್ಯ ಕಾರ್ಯದರ್ಶಿ ಕುಮಾರ್ ಸಮತಳ ಮಾತನಾಡಿ ಅಪಾಯದಲ್ಲಿರುವ ಸಂವಿಧಾನ ರಕ್ಷಿಸುವುದು ಎಲ್ಲರ ಹೊಣೆ. ಸಂವಿಧಾನ ಬದಲಾಯಿಸುವವರ ವಿರುದ್ದ ಪ್ರತಿರೋಧ ತೋರಬೇಕೆಂದು ಸಲಹೆ ನೀಡಿದರು.

ನಿವೃತ್ತ ಪಿ.ಯು. ಡಿ.ಡಿ.ಪಿ.ಐ. ಶಿವಕುಮಾರ್ ಮಾತನಾಡುತ್ತ ಸಂವಿಧಾನ ಹಾಳಾಗಿದೆ. ಕೇಂದ್ರ ಸರ್ಕಾರಕ್ಕೆ ಪ್ರತಿ ಪ್ರಜೆಯೂ ತೆರಿಗೆ ಕಟ್ಟುತ್ತಿದ್ದಾನೆ. ಆದರೆ ಅನ್ಯಾಯ ಅಕ್ರಮಗಳನ್ನು ಪ್ರಶ್ನಿಸುವಂತಿಲ್ಲ. ಸಂವಿಧಾನ ದಮನಗೊಳಿಸುವವರ ವಿರುದ್ದ ಹೋರಾಡಬೇಕಿದೆ ಎಂದರು.

ಯುವ ನ್ಯಾಯವಾದಿಗಳಾದ ಓ.ಪ್ರತಾಪ್‌ಜೋಗಿ, ಮಾಲತೇಶ್ ಅರಸ್, ಅಶೋಕ್‌ಬೆಳಗಟ್ಟ ಇವರುಗಳು ಮಾತನಾಡಿದರು.

ನ್ಯಾಯವಾದಿ ಮಹಮದ್ ಸಾಧಿಕ್‌ವುಲ್ಲಾ, ಟಿ.ಶಫಿವುಲ್ಲಾ, ದಿಲ್‌ಶಾದ್ ಉನ್ನಿಸ, ವಕೀಲರ ಸಂಘದ ಮಾಜಿ ಅಧ್ಯಕ್ಷ ವಿಜಯಕುಮಾರ್ ಇವರುಗಳು ವೇದಿಕೆಯಲ್ಲಿದ್ದರು.

# ಚಿತ್ರದುರ್ಗ: ರೂ.78.42 ಲಕ್ಷ ವೆಚ್ಚದ ಅಭಿವೃದ್ಧಿ ಕಾಮಗಾರಿಗಳಿಗೆ ಭೂಮಿಪೂಜೆ

» ಚಿತ್ರದುರ್ಗ



ಚಿತ್ರದುರ್ಗ ನಗರಾಭಿವೃದ್ಧಿ ಪ್ರಾಧಿಕಾರದ ವತಿಯಿಂದ ನಗರದ ವಿವಿಧೆಡೆಗಳಲ್ಲಿ ರೂ.78.42 ಲಕ್ಷ ವೆಚ್ಚದ ನಾನಾ ಅಭಿವೃದ್ಧಿ ಕಾಮಗಾರಿಗಳಿಗೆ ಶಾಸಕ ಕೆ.ಸಿ.ವೀರೇಂದ್ರ ಪಪ್ಪಿ ಹಾಗೂ ಸಂಸದ ಗೋವಿಂದ ಎಂ.ಕಾರಜೋಳ ಅವರು ಮಂಗಳವಾರ ಭೂಮಿಪೂಜೆ ನೆರವೇರಿಸಿದರು.

ಇಲ್ಲಿನ ಗಾಂಧಿನಗರದ ಐಯುಡಿಪಿ ಲೇಔಟ್ ಹತ್ತಿರ ಕೆಳಗೋಟೆ ಯಲ್ಲಿ ರೂ.15.72 ಲಕ್ಷ ವೆಚ್ಚದಲ್ಲಿ ಉದ್ಯಾನವನ ಅಭಿವೃದ್ಧಿ ಕಾಮಗಾರಿ, ಹಳೇ ಮಾಧ್ಯಮಿಕ ಶಾಲಾ ಆವರಣದಲ್ಲಿ ರೂ.16.57 ಲಕ್ಷ ವೆಚ್ಚದಲ್ಲಿ ಪಾತ್ವೆ, ಪೆವಿಲಿಯನ್ ಹಾಗೂ ಯೋಗಾಸನ ಪ್ಲಾಟ್ ಫಾರಂ ನಿರ್ಮಿಸುವ ಕಾಮಗಾರತಿ, ತುರುವನೂರು ರಸ್ತೆಯಲ್ಲಿರುವ ವಿಷ್ಣುವರ್ಧನ ಪಾರ್ಕ್‌ಗೆ ಉಳಿದ ಭಾಗಕ್ಕೆ ರೂ.4.73 ಲಕ್ಷ ವೆಚ್ಚದಲ್ಲಿ ತಂತಿಬೇಲಿ ಅಳವಡಿಸುವುದು ಮತ್ತು ವಿದ್ಯುತ್ ದೀಪ ಅಳವಡಿಸುವ ಕಾಮಗಾರಿ, ತುರುವನೂರು ರಸ್ತೆಯ ರೈಲ್ವೆ ಅಂಡರ್ ಪಾಸ್ ಸಮೀಪದ ವೈಭವ್ ಲೇಔಟ್ ಹತ್ತಿರ ಪಿಳ್ಳೇಕೆರನಳ್ಳಿ ಬಳಿ ರೂ.10.90 ಲಕ್ಷ ವೆಚ್ಚದಲ್ಲಿ ಉದ್ಯಾನವನ ಅಭಿವೃದ್ಧಿ ಕಾಮಗಾರಿ ಹಾಗೂ ಇದೇ ಪಿಳ್ಳೇಕರನಹಳ್ಳಿಯಲ್ಲಿ ರೂ.9.53 ಲಕ್ಷ ವೆಚ್ಚದಲ್ಲಿ ಉದ್ಯಾನವನ ಅಭಿವೃದ್ಧಿ ಕಾಮಗಾರಿ, ಬಿವಿಕೆಎಸ್ ಲೇಔಟ್ ಮತ್ತು ತಾಜ್‌ಪೀರ್ ಲೇಔಟ್‌ನಲ್ಲಿ ರೂ.20.97 ಲಕ್ಷ ವೆಚ್ಚದಲ್ಲಿ ಉದ್ಯಾನವನ ಅಭಿವೃದ್ಧಿ ಕಾಮಗಾರಿ ಸೇರಿದಂತೆ ಒಟ್ಟಾರೆ 78. 42 ಲಕ್ಷ ರೂ. ವೆಚ್ಚದಲ್ಲಿ ನಗರದ ವಿವಿಧೆಡೆ ಕೈಗೊಳ್ಳಲಾಗುತ್ತಿರುವ ಕಾಮಗಾರಿಗಳಿಗೆ ಭೂಮಿಪೂಜೆ ನೆರವೇರಿಸಲಾಯಿತು.

ಈ ಸಂದರ್ಭದಲ್ಲಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಎಂ.ಕೆ.ತಾಜ್‌ಪೀರ್, ಜಿಲ್ಲಾ ಗ್ಯಾರಂಟಿ ಯೋಜನೆ ಪ್ರಾಧಿಕಾರದ ಉಪಾಧ್ಯಕ್ಷ ಡಿ.ಎನ್.ಮೈಲಾರಪ್ಪ, ನಗರಾಭಿವೃದ್ಧಿ ಪ್ರಾಧಿಕಾರದ ಆಯುಕ್ತ ಸೋಮಶೇಖರ್, ನಗರಸಭೆ ಪೌರಾಯುಕ್ತೆ ಎಂ.ರೇಣುಕಾ ಸೇರಿದಂತೆ ನಗರಾಭಿವೃದ್ಧಿ ಪ್ರಾಧಿಕಾರದ ನಾಮನಿರ್ದೇಶಿತ ಸದಸ್ಯರು, ನಗರಸಭೆ ಸದಸ್ಯರುಗಳು ಇದ್ದರು.

## ಅಪ್ರಾಪ್ತ ಬಾಲಕಿಯರ ಮೇಲೆ ಅತ್ಯಾಚಾರ ಖಂಡಿಸಿ ಪ್ರತಿಭಟನೆ



» ಚಿತ್ರದುರ್ಗ

ಯಾದಗಿರಿ ಜಿಲ್ಲೆ ಗುರುಮಠಕಲ್ ಇಂದಿರನಗರದ ಅಲೆಮಾರಿ ವೇಷಗಾರ(ಬುಡ್ಗಜಂಗಮ) ಸಮುದಾಯಕ್ಕೆ ಸೇರಿದ ಅಪ್ರಾಪ್ತ ವಯಸ್ಸಿನ ಇಬ್ಬರು ಬಾಲಕಿಯರ ಮೇಲೆ ಅತ್ಯಾಚಾರವೆಸಗಿ ಅಮಾನುಷವಾಗಿ ಕೊಲೆ ಮಾಡಿರುವವರನ್ನು ಕೂಡಲೆ ಬಂಧಿಸಿ ಕಾನೂನು ರೀತಿಯ ಕ್ರಮ ಕೈಗೊಳ್ಳುವಂತೆ ಜಿಲ್ಲಾ ಅಲೆಮಾರಿ ಬುಡ್ಗ ಜಂಗಮ ಒಕ್ಕೂಟ, ಅಲೆಮಾರಿ, ಅರೆಅಲೆಮಾರಿ ಮಹಾಸಭಾ, ಕರ್ನಾಟಕ ಶಾಂತಿ ಮತ್ತು ಸೌಹಾರ್ದ ವೇದಿಕೆ ವತಿಯಿಂದ ಜಿಲ್ಲಾಧಿಕಾರಿ ಕಚೇರಿ ಎದುರು ಮಂಗಳವಾರ ಪ್ರತಿಭಟನೆ ನಡೆಸಿ ಕಚೇರಿ ಸಹಾಯಕರಿಗೆ ಮನವಿ ಸಲ್ಲಿಸಲಾಯಿತು. ಚಿಂದಿ ಆಯಲು ಮನೆಯಿಂದ ಹೊರಗೆ ಹೋಗಿದ್ದ ಶ್ಯಾಮಮ್ಮ, ಸಾಯಮ್ಮ ಇವರುಗಳು ನೀಲಹಳ್ಳಿ ಗ್ರಾಮದ ಕೆರೆಯಲ್ಲಿ ಶವವಾಗಿ ಪತ್ತೆಯಾಗಿರುವುದನ್ನು ನೋಡಿದರೆ ಅತ್ಯಾಚಾರವೆಸಗಿ ನಂತರ ಕೊಲೆಗೈದಿರುವ ಅನುಮಾನವಿದೆ. ಇದರಿಂದ ಬಡ್ಗ ಜಂಗಮ ಸಮುದಾಯ ತೀವ್ರ ಆತಂಕಕ್ಕೆ ಒಳಗಾಗಿದೆ. ಘಟನೆ ನಡೆದು ಹದಿನೈದು ದಿನಗಳಾಗಿದ್ದರೂ ಇನ್ನು ಆರೋಪಿಗಳನ್ನು ಪೊಲೀಸರು ಬಂಧಿಸಿಲ್ಲ. ಸಾವಿಗೀಡಾಗಿರುವ ಕುಟುಂಬಗಳಿಗೆ ಸರ್ಕಾರ ತಲಾ ಐವತ್ತು ಲಕ್ಷ ರೂ.ಗಳ ಪರಿಹಾರ ನೀಡುವಂತೆ ಪ್ರತಿಭಟನಾಕಾರರು ಸರ್ಕಾರವನ್ನು ಒತ್ತಾಯಿಸಿದರು. ಬುಡ್ಗ ಜಂಗಮ ಒಕ್ಕೂಟದ ಅಧ್ಯಕ್ಷ ವಸಂತಕುಮಾರ್, ಅಲೆಮಾರಿ ಅರೆಅಲೆಮಾರಿ ಮಹಾಸಭಾ ಅಧ್ಯಕ್ಷ ಕೆ.ಎಂ.ನಾಗರಾಜ, ದಾಸ ಸಮುದಾಯದ ನಾಗರಾಜ, ವಿಭೂತಿ ಮಾರಪ್ಪ, ತಿಪ್ಪೇಸ್ವಾಮಿ, ಕರ್ನಾಟಕ ಶಾಂತಿ ಮತ್ತು ಸೌಹಾರ್ದ ವೇದಿಕೆ ಅಧ್ಯಕ್ಷ ನರೇನಹಳ್ಳಿ ಅರುಣ್‌ಕುಮಾರ್, ಶಿವಕುಮಾರ್, ಮಂಜುನಾಥ ಪಾಲ್ಗೊಂಡಿದ್ದರು.

## ಸಿದ್ದಪ್ಪನ ಬೆಟ್ಟದಲ್ಲಿ ಇಂದಿನಿಂದ ಶ್ರೀ ಸಿದ್ದೇಶ್ವರ ಸ್ವಾಮಿಯವರ ಮಹಾಶಿವರಾತ್ರಿ

**ಹೊಸದುರ್ಗ:** ಪಟ್ಟಣದ ಹೊಳಲ್ಕೆರೆ ರಸ್ತೆಯ ಸಿದ್ದಪ್ಪನ ಬೆಟ್ಟದಲ್ಲಿರುವ ಶ್ರೀ ಸಿದ್ದೇಶ್ವರ ಸ್ವಾಮಿ ದೇವಾಲಯದಲ್ಲಿ ಮಾ.26 ರಂದು ಬುಧವಾರ ಮತ್ತು ಮಾ.27 ರಂದು ಗುರುವಾರ ಎರಡು ದಿನಗಳ ಕಾಲ ಮಹಾಶಿವರಾತ್ರಿ ಕಾರ್ಯಕ್ರಮವನ್ನ ಆಯೋಜಿಸಲಾಗಿದ್ದು ಮಾ.26 ರಂದು ಬುಧವಾರ ಬೆಳಿಗ್ಗೆ 8 ಗಂಟೆಗೆ ಅಭಿಷೇಕ ಮತ್ತು ಮಹಾಮಂಗಳಾರತಿ ನಂತರ ನಿರಂತರ ದಾಸೋಹ ಕಾರ್ಯಕ್ರಮವಿದ್ದು ಶಿವನೇಕಟ್ಟೆಯ ಶ್ರೀ ಕಲ್ಲೇಶ್ವರಸ್ವಾಮಿ ವೀರಗಾಸೆ ಕಲಾತಂಡದವರಿಂದ ವೀರಗಾಸೆ, ಹೊಸದುರ್ಗ ವಿವೇಕ ಜಾಗೃತ ಬಳಗದವರಿಂದ,ದೈವಜ್ಞ ಭಜನಾ ಮಂಡಳಿ ಶ್ರೀಮತಿ ಸುನೀತರಾಯ್ಕರ್ ಮತ್ತು ಸಂಗಡಿಗರಿಂದ ಹಾಗೂ ವಿಶ್ವಮಾತಾ ಭಜನಾ ಮಂಡಳಿ ಹೊಸದುರ್ಗದ ಶ್ರೀಮತಿ ಪುಷ್ಪಲತಾ ಮತ್ತು ಸಂಗಡಿಗರಿಂದ ಭಜನೆ. ರಾತ್ರಿ 7.30 ರಿಂದ ಶ್ರೀ ಸಾಯಿ ಸತೀಶ್ ಚಿಕ್ಕಮಗಳೂರು ಹಾಗೂ ಸಿಂಚನ ಮೈಸೂರು ಇವರು ಪ್ರಸ್ತುತ ಪಡಿಸುವ ಶ್ರೀ ಸಾಯಿ ಧ್ವನಿ ಸಂಭ್ರಮ ಸಂಗೀತ ಕಾರ್ಯಕ್ರಮ ಇದೇ ದಿನ ರಾತ್ರಿ 11 ಗಂಟೆಗೆ ಕನ್ನಡ ಸೇವಾರತ್ನ ಪ್ರಶಸ್ತಿ ಪುರಸ್ಕೃತರು ಮತ್ತು ಭಗವತರಾದ ಕಂಗುವಳ್ಳಿರಾಜಪ್ಪ ಇವರಿಂದ ಶಿವಪುರಾಣ ಕಥಾವಳಿ ಕಾರ್ಯಕ್ರಮಗಳು ಜರುಗಲಿದ್ದು ಮಾ.27 ರಂದು ಗುರುವಾರ ಬೆಳಿಗ್ಗೆ 6 ಗಂಟೆಗೆ ಶ್ರೀ ಸಿದ್ದೇಶ್ವರ ಸ್ವಾಮಿಗೆ ಮಹಾಶಿವರಾತ್ರಿಯ ರುದ್ರಾಭೀಷೇಕ ಮಹಾಮಂಗಳಾರತಿ ಮತ್ತು ಪ್ರಸಾದ ವಿನಿಯೋಗ ಕಾರ್ಯಕ್ರಮವಿರುತ್ತದೆ.

## ಪ್ರಮುಖ ಸುದ್ದಿ

# ಮಾ.1 ರಿಂದ 51 ನೇ ವರ್ಷದ ವನಕಲ್ಲು ಮಲ್ಲೇಶ್ವರ ಜಾತ್ರೆ

» ಚಿತ್ರದುರ್ಗ



ಬೆಂಗಳೂರು ಗ್ರಾಮಾಂತರ ಜಿಲ್ಲೆಯಲ್ಲಿರುವ ವನಕಲ್ಲು ಮಲ್ಲೇಶ್ವರ ಮಹಾಸಂಸ್ಥಾನ ಮಠದಲ್ಲಿ ಮಾ.1 ರಿಂದ 9 ರವರೆಗೆ 51 ನೇ ವರ್ಷದ ವನಕಲ್ಲು ಮಲ್ಲೇಶ್ವರ ಜಾತ್ರಾ ಮಹೋತ್ಸವ, ವನಕಲ್ಲು ಶ್ರೀ ಪ್ರಶಸ್ತಿ, ವಿವಿದ ಪ್ರಶಸ್ತಿ ಪ್ರದಾನ, ಸಂಸ್ಕೃತೋತ್ಸವ, ರಾಜ್ಯ ಮಟ್ಟದ ಜಾನಪದೋತ್ಸವ, ಕವಿ ಕಾವ್ಯ ಸಮ್ಮೇಳನ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಯೋಗದೊಂದಿಗೆ ನಡೆಯಲಿದೆ ಎಂದು ಬಸವ ರಮಾನಂದ ಮಹಾಸ್ವಾಮಿ ತಿಳಿಸಿದರು.

ಪತ್ರಕರ್ತರ ಭವನದಲ್ಲಿ ಮಂಗಳವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು 1,2,5 ರಂದು ಯುವಕ-ಯುವತಿಯರು ಹಾಗೂ ಮಕ್ಕಳಿಗೆ ಕ್ರೀಡೆಯನ್ನು ಏರ್ಪಡಿಸಲಾಗಿದೆ. 6, 7 ರಂದು ದನಗಳ ಜಾತ್ರೆ, 8 ರಂದು ಜನಪದೋತ್ಸವ, ಕವಿ ಕಾವ್ಯ ಸಮ್ಮೇಳನ, ರಾಜ್ಯದ 36 ಜಿಲ್ಲೆಗಳಿಂದ 60 ಕ್ಕು ಹೆಚ್ಚು ಕವಿಗಳು ಭಾಗವಹಿಸಿ ಕವನ ವಾಚಿಸುವರು. 9 ರಂದು ಬ್ರಹ್ಮರಥೋತ್ಸವ, ಶಾಲಾ ಶಿಕ್ಷಕರುಗಳಿಂದ ಕುರುಕ್ಷೇತ್ರ ನಾಟಕ ಪ್ರದರ್ಶನಗೊಳ್ಳಲಿದೆ. ವನಕಲ್ಲು ಪ್ರಶಸ್ತಿಯನ್ನು ಡಾ.ಎಂ.ಆರ್.ಸೀತಾರಾಮ್

ಕರ್ನಾಟಕ ರಾಜ್ಯ ಮಹಿಳಾ ಆಯೋಗದ ಅಧ್ಯಕ್ಷೆ ಡಾ.ನಾಗಲಕ್ಷ್ಮಿ ಚೌಧರಿಗೆ ಜಗಜ್ಯೋತಿ ಪ್ರಶಸ್ತಿ, ಡಾ.ಸಿ.ನಾಗಭೂಷಣ್‌ರವರಿಗೆ ವಿಶ್ವಜ್ಯೋತಿ ಪ್ರಶಸ್ತಿ, ಡಾ.ಸಿ.ನಂಜುಂಡಯ್ಯನವರಿಗೆ ಬಾಲಗಂಗಾಧರನಾಥ ಪ್ರಶಸ್ತಿ, ರಜತಾ ಶಿವಕುಮಾರ್‌ರವರಿಗೆ ಶರಣಶ್ರಿ ಪ್ರಶಸ್ತಿ ಪ್ರದಾನ ಮಾಡಲಾಗುವುದು. ಭಕ್ತಾಧಿಗಳು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಳ್ಳುವಂತೆ ಬಸವ ರಮಾನಂದ ಮಹಾಸ್ವಾಮಿ ಹೇಳಿದರು.

ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ ಮಾಜಿ ಅಧ್ಯಕ್ಷ ಡಾ.ದೊಡ್ಡಮಲ್ಲಯ್ಯ ಮಾತನಾಡಿ ವನಕಲ್ಲು ಮಲ್ಲೇಶ್ವರ ಮಹಾಸಂಸ್ಥಾನ ಮಠದಲ್ಲಿ ಒಂಬತ್ತು ದಿನಗಳ ಕಾಲ ನಡೆಯುವ ಜಾತ್ರಾ ಮಹೋತ್ಸವ, ಪ್ರಶಸ್ತಿ ಪ್ರದಾನ, ಸಂಸ್ಕೃತೋತ್ಸವ, ರಾಜ್ಯ ಮಟ್ಟದ ಜಾನಪದೋತ್ಸವ, ಕವಿ ಕಾವ್ಯ ಸಮ್ಮೇಳನದಿಂದ ನಮ್ಮ ನಾಡಿನ ಸಂಸ್ಕೃತಿಯನ್ನು ಉಳಿಸಿ ಬೆಳೆಸಿದಂತಾಗುತ್ತದೆ. ಜೊತೆಗೆ ಕವಿಗಳು ತಮ್ಮಲ್ಲಿರುವ ಪ್ರತಿಭೆಯನ್ನು ಹೊರ ಹೊಮ್ಮಿಸಲು ವೇದಿಕೆ ಸೃಷ್ಟಿ ಮಾಡಿದಂತಾಗುತ್ತದೆ ಎಂದರು.

ಯುವ ವಕೀಲರುಗಳಾದ ಓ.ಪ್ರತಾಪ್‌ಜೋಗಿ, ಸೌಮ್ಯ, ಪುಷ್ಪ, ರಮೇಶ್,ಅಲೆಮಾರಿ ಮತ್ತು ಅರೆಅಲೆಮಾರಿ ಜನಾಂಗದ ಜಿಲ್ಲಾಧ್ಯಕ್ಷ ಎಸ್.ಲಕ್ಷ್ಮಿಕಾಂತ್, ದಲಿತ ಮುಖಂಡ ಬಿ.ರಾಜಪ್ಪ, ಗ್ಯಾರೆಂಟಿ ಅನುಷ್ಠಾನಗಳ ಸಮಿತಿ ಜಿಲ್ಲಾಧ್ಯಕ್ಷ ಆರ್.ಶಿವಣ್ಣ, ವಿಜಯಕುಮಾರ್, ನಾಗರಾಜ್, ಕಣಿವೆಮಾರಮ್ಮ ಸಂಘದ ಅಧ್ಯಕ್ಷ ತಿಪ್ಪೇಸ್ವಾಮಿ, ಮೂರ್ತಿ ಇವರುಗಳು ಪತ್ರಿಕಾಗೋಷ್ಠಿಯಲ್ಲಿ ಹಾಜರಿದ್ದರು.

# ಪೋಕ್ಸೋ ಸಂತ್ರಸ್ಥೆಗೆ ನ್ಯಾಯ ಹಾಗೂ ಸೂಕ್ತ ನೆರವು ದೊರಕಬೇಕು: ನ್ಯಾ.ರಾಜೇಶ್ವರಿ ಹೆಗಡೆ

» ದಾವಣಗೆರೆ

ಪೋಕ್ಸೋ ಕಾಯ್ದೆಯಲ್ಲಿ ದಾಖಲಾಗುವ ಪ್ರಕರಣಗಳಲ್ಲಿ ಸಂತ್ರಸ್ಥರಿಗೆ ತ್ವರಿತ ನ್ಯಾಯದ ಜೊತೆಗೆ ಸೂಕ್ತ ನೆರವು ಹಾಗೂ ಸೌಲಭ್ಯಗಳು ದೊರಕುವಂತಾಗಬೇಕು ಎಂದು ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶೆ ರಾಜೇಶ್ವರಿ.ಎನ್.ಹೆಗಡೆ ಹೇಳಿದರು.

ಮಂಗಳವಾರ(ಫೆ.25) ರಂದು ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರ ನ್ಯಾಯಾಲಯ ಸಭಾಂಗಣದಲ್ಲಿ ಆಯೋಜಿಸಲಾಗಿದ್ದ ಜಿಲ್ಲಾ ಮಟ್ಟದ ಪೋಕ್ಸೋ ಸಭೆ ಹಾಗೂ ವಿಶೇಷ ಕಾರ್ಯಪಡೆ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಮಕ್ಕಳಿಗೆ ರಕ್ಷಣಾ ಕಾಯ್ದೆಗಳು ಸೇರಿದಂತೆ ಮೂಲಭೂತ ಹಕ್ಕು ಮತ್ತು ಕರ್ತವ್ಯಗಳ ಅರಿವು ಮೂಡಿಸಲು ನುರಿತ ವಕೀಲರ ತಂಡಗಳನ್ನು ರಚಿಸಿ ಶಾಲೆಗಳಲ್ಲಿ ಕಾನೂನು ಅರಿವು ಕಾರ್ಯಕ್ರಮಗಳನ್ನು ನಡೆಸಬೇಕು. ಆವರಗೆರೆ ಎಸ್‌ಪಿಎಸ್ ನಗರದಲ್ಲಿರುವ ಶಾಲೆಯಲ್ಲಿ ಲೈಬ್ರರಿ ಸ್ಥಾಪಿಸಬೇಕು. ಸಾಮಾಜಿಕವಾಗಿ ಹಿಂದುಳಿದ ವರ್ಗದವರಿಗೆ ಸರ್ಕಾರದ ಸೌಲಭ್ಯಗಳು ಸಿಗುವಂತಾಗಬೇಕು. ಪೋಕ್ಸೋ ಕಾಯ್ದೆಯಡಿ ದಾಖಲಾಗುವ ಸಂತ್ರಸ್ಥರಿಗೆ ತುರ್ತು ಮತ್ತು ಮಧ್ಯಂತರ ಪರಿಹಾರ ಸೇರಿದಂತೆ ಎಲ್ಲಾ ಸೌಲಭ್ಯಗಳು ಗರಿಷ್ಠ ಪ್ರಮಾಣದಲ್ಲಿ ದೊರಕಬೇಕು. ಅವರಿಗಿರುವ ಕಾನೂನಿನ ಅವಕಾಶಗಳ ಮಾಹಿತಿ ದೊರಕಿಸಲು ಇಲಾಖೆ ಮುಂದಾಗಬೇಕು ಎಂದರು.



ಹಿರಿಯ ಸಿವಿಲ್ ನ್ಯಾಯಾಧೀಶ ಹಾಗೂ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಮಹಾವೀರ.ಮ.ಕರೆಣ್ಣವರ ಮಾತನಾಡಿ ಶಾಲೆ, ಹಾಸ್ಟೆಲ್‌ಗಳಲ್ಲಿ ಗ್ರಂಥಾಲಯ ಇಲ್ಲದೇ ಇರುವುದು ತುಂಬಾ ಬೇಸರದ ಸಂಗತಿಯಾಗಿದೆ. ಹಾಸ್ಟೆಲ್‌ಗಳಲ್ಲಿ ಮಕ್ಕಳಿಗೆ ಹಾಸಿಗೆ ವ್ಯವಸ್ಥೆ, ಊಟ, ವಸತಿಯ ವ್ಯವಸ್ಥೆ, ಓದಲು ಬರೆಯಲು ಟೇಬಲ್ ನೀಡಬೇಕು ಎಂದು ಅಧಿಕಾರಿಗಳಿಗೆ ಸೂಚಿಸಿದರು.

ಜಿಲ್ಲಾ ಆಸ್ಪತ್ರೆಯ ಕಟ್ಟಡ ತುಂಬಾ ಹಳೇಯದಾಗಿದೆ. ಕೂಡಲೇ ಕಟ್ಟಡ ನವೀಕರಣಕ್ಕೆ ಕ್ರಮಕೈಗೊಳ್ಳಬೇಕು. ಬಾಣಂತಿ, ಗರ್ಭಿಣಿಯವರಿಗೆ ಗುಣಮಟ್ಟದ ಔಷಧಿಯನ್ನು ನೀಡಬೇಕು. ಅಂಗನವಾಡಿ ಕಾರ್ಯಕರ್ತೆಯರು, ಸಹಾಯಕಿಯರು ಹೆಚ್ಚು ಜಾಗೃತಿಯಿಂದ ಕೆಲಸ ನಿರ್ವಹಿಸಬೇಕು. ಉಪಯುಕ್ತವಾದ ಸಮಯದಲ್ಲಿ ಆಶಾಕಾರ್ಯಕರ್ತೆಯರು ಸ್ಥಳದಲ್ಲಿ ಇರಬೇಕು. ಸಿಡಿಪಿಒ ತಮ್ಮ ವ್ಯಾಪ್ತಿಯ ಅಂಗನವಾಡಿ ಕೇಂದ್ರಗಳಿಗೆ ಭೇಟಿ ನೀಡಬೇಕು ಎಂದು ಸೂಚಿಸಿದರು.

ಪೋಕ್ಸೋ ಕಾಯ್ದೆ ಕುರಿತು ಜಾಗೃತಿ ಎಲ್ಲಾ ಶಾಲಾ, ಕಾಲೇಜುಗಳಲ್ಲಿ ಜಾಗೃತಿ ನೀಡಬೇಕು. ಬಾಲ್ಯ ವಿವಾಹ ನಿಷೇಧ, ಪೋಕ್ಸೋ ಕಾಯ್ದೆ, ಮಾನವ ಕಳ್ಳಸಾಗಣೆ ತಡೆ, ಬಾಲನ್ಯಾಯ ಮಂಡಳಿ ಸೇರಿದಂತೆ ಸಹಾಯಕ್ಕಾಗಿ ಇರುವ ಮತ್ತು ತುರ್ತು ಸಂಪರ್ಕಕ್ಕಾಗಿ ಇರುವ ಸಹಾಯವಾಣಿಗಳ ಕುರಿತಂತೆ ಶಾಲಾ, ಕಾಲೇಜುಗಳ ಸೂಚನಾ ಫಲಕಗಳಲ್ಲಿ ವಿದ್ಯಾರ್ಥಿಗಳಿಗೆ ಕಾಣುವಂತೆ ಪ್ರದರ್ಶಿಸಬೇಕು.ಇಂತಹ ಕಾನೂನುಗಳ ವಿಷಯವಾಗಿ ವಿದ್ಯಾರ್ಥಿಗಳಿಗೆ ಅರಿವು ಮೂಡಿಸಬೇಕೆಂದು ಸೂಚನೆ ನೀಡಿದರು. ಭಾಷಾ ನಗರ, ಅಜಾದ್ ನಗರ, ಗಾಂಧಿನಗರಗಳಲ್ಲಿ ತುಂಬಾ ಕಳ್ಳತನ ಪ್ರಕರಣಗಳು ಕಂಡು ಬಂದಿರುತ್ತದೆ. ಕೂಡಲೇ ಇದರ ಬಗ್ಗೆ ಕಾಳಜಿವಹಿಸಿ ಎಂದು ಪೊಲೀಸ್ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು. ಮಾರ್ಚ್ 8 ರಂದು ರಾಷ್ಟ್ರೀಯ ಲೋಕಾದಾಲತ್ ನಡೆಯಲಿದ್ದು, ಅಷ್ಟರೊಳಗಾಗಿ ಎಲ್ಲಾ ರಾಜೀಯಾಗಬಲ್ಲ ಪ್ರಕರಣಗಳನ್ನು ಪಟ್ಟಿ ಮಾಡಿ ಇತ್ಯರ್ಥಕ್ಕೆ ಕ್ರಮ ವಹಿಸಬೇಕು. ಸಾರ್ವಜನಿಕರು ಸಹ ಈ ಅವಕಾಶವನ್ನು ಸದ್ಬಳಕೆ ಮಾಡಿಕೊಳ್ಳುವಂತೆ ಇಲಾಖೆಗಳು ಗಮನ ಹರಿಸಲು ತಿಳಿಸಿದರು. ಹೆಚ್ಚುವರಿ ಪೊಲೀಸ್ ಅಧೀಕ್ಷಕರಾದ ಮಂಜುನಾಥ್, ಜಿ.ಪಂ. ಯೋಜನಾ ನಿರ್ದೇಶಕರಾದ ಮಲ್ಲನಾಯ್ಕ, ವಕೀಲರಾದ ಬಸವರಾಜ್ ಹಾಗೂ ಜಿಲ್ಲಾ ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.

ರಾಷ್ಟ್ರೀಯವಿಜ್ಞಾನ ದಿನಾಚರಣೆ ನಿಮಿತ್ತ ವಿದ್ಯಾರ್ಥಿಗಳಿಂದ ವಸ್ತು ಪ್ರದರ್ಶನ

# ಮಕ್ಕಳಲ್ಲಿ ವೈಜ್ಞಾನಿಕ ಮನೋಭಾವ ಬೆಳೆಸಿ

» ನಾಯಕನಹಟ್ಟಿ

ಮಕ್ಕಳಲ್ಲಿ ಮೂಢನಂಬಿಕೆ ತೊಲಗಿಸಿ ವೈಜ್ಞಾನಿಕ ಮನೋಭಾವ ಬೆಳೆಸಲು ಹಾಗೂ ವಿಜ್ಞಾನದಲ್ಲಿ ಹೆಚ್ಚಿನ ಆಸಕ್ತಿ ಬೆಳೆಸಲು ವಿಜ್ಞಾನ ವಸ್ತು ಪ್ರದರ್ಶನ ಅತ್ಯಂತ ಸಹಕಾರಿಯಾಗಿದೆ ಎಂದು ಪಟ್ಟಣ ಪಂಚಾಯತಿ ಅಧ್ಯಕ್ಷೆ ಟಿ.ಮಂಜುಳಾ ಶ್ರೀಕಾಂತ್ ಹೇಳಿದರು.

ಪಟ್ಟಣದ ಸರ್ಕಾರಿ ಮಾದರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಮಂಗಳವಾರ ನಡೆದ ರಾಷ್ಟ್ರೀಯ ವಿಜ್ಞಾನ ದಿನಾಚರಣೆ ನಿಮಿತ್ತ ವಿದ್ಯಾರ್ಥಿಗಳಿಂದ ರಚಿತವಾದ ವಿಜ್ಞಾನ ವಸ್ತು ಪ್ರದರ್ಶನ ಕಾರ್ಯಕ್ರಮದಲ್ಲಿ ಭಾಗವಹಿಸಿ ಅವರು ಮಾತನಾಡಿದರು.



ವಿದ್ಯಾರ್ಥಿಗಳು ವೈಜ್ಞಾನಿಕ ಮನೋಭಾವ ಬೆಳೆಸಿಕೊಳ್ಳುವ ಮೂಲಕ ಉನ್ನತ ಶಿಕ್ಷಣ ಪಡೆಯಬೇಕು. ವಿಜ್ಞಾನ ಕಲಿಕೆಯಲ್ಲಿ ಹೆಚ್ಚಿನ ಆಸಕ್ತಿ ಬೆಳೆಸಿಕೊಂಡು ವಿಜ್ಞಾನ ಮತ್ತು ತಂತ್ರಜ್ಞಾನ ಕ್ಷೇತ್ರದಲ್ಲಿ ಉತ್ತಮ ಸಾಧನೆ ಮಾಡಬೇಕು. ಇಲ್ಲಿನ ಶಾಲೆಯಲ್ಲಿ ಸುಸಜ್ಜಿತ ವಿಜ್ಞಾನ ಪ್ರಯೋಗಾಲಯ ಇದ್ದು ವಿದ್ಯಾರ್ಥಿಗಳು ಇದರ ಸದುಪಯೋಗ ಪಡೆದುಕೊಂಡು ಪ್ರಜ್ಞಾವಂತರಾಗುವಂತೆ ಸಲಹೆ ನೀಡಿದರು.

ವೈಜ್ಞಾನಿಕ ಮನೋಭಾವದಿಂದ ಸಮಾಜದಲ್ಲಿ ಆಳವಾಗಿ ಬೇರೂರಿರುವ ಅಜ್ಞಾನ, ಅಂಧಕಾರ, ಮೌಢ್ಯವನ್ನು ದೂರಮಾಡಲು ಸಹಕಾರಿಯಾಗುತ್ತದೆ. ಗ್ರಾಮೀಣ ಪ್ರದೇಶದಲ್ಲಿ ಮಾಟ ಮಂತ್ರ ತಂತ್ರ ಎಂಬ ಹಲವು ಮೌಢ್ಯಗಳನ್ನು ಕೆಲವರು ಹಬ್ಬಿಸುತ್ತಾರೆ. ಅವುಗಳನ್ನೇ ನಂಬಿ ಸಾರ್ವಜನಿಕರು ಮೋಸ ಹೋಗುತ್ತಾರೆ. ಈ ಎಲ್ಲ ಮಾಟಮಂತ್ರ ತಂತ್ರಗಳಲ್ಲಿ ಯಾವುದೇ ಅತಿಮಾನುಷ ಶಕ್ತಿ ಇರುವುದಿಲ್ಲ. ಬದಲಿಗೆ ಶುದ್ಧವಾದ ಮೂಲವಿಜ್ಞಾನದ ಅಂಶಗಳು ಅಡಗಿರುತ್ತವೆ. ಅವುಗಳನ್ನು ಅರ್ಥಮಾಡಿಕೊಳ್ಳಬೇಕಾದರೆ ಪ್ರಾಥಮಿಕ ಶಿಕ್ಷಣದಿಂದಲೇ ವಿದ್ಯಾರ್ಥಿಗಳು ಮೂಲ ವಿಜ್ಞಾನದ ಅಧ್ಯಯನದಲ್ಲಿ ತೊಡಗಬೇಕು ಎಂದರು.

ಪಪಂ ಉಪಾಧ್ಯಕ್ಷೆ ಸರ್ವಮಂಗಳಾ ಎಸ್. ಉಮಾಪತಿ ಮಾತನಾಡಿ, ಮಕ್ಕಳ ಆರಂಭಿಕ ಹಂತದಲ್ಲಿ ಚಿಕ್ಕಚಿಕ್ಕ ಪ್ರಯೋಗಗಳು ಮತ್ತು ಮಾದರಿಗಳನ್ನು ರಚಿಸಲು ಮುಂದಾಗಬೇಕು. ಆಗ ವಿಜ್ಞಾನದ ಪರಿಚಯವಾಗಿ ವೈಜ್ಞಾನಿಕ ಮನೋಭಾವನೆಗಳನ್ನು ಬೆಳೆಸಿಕೊಳ್ಳಲು ಸಹಕಾರಿಯಾಗುತ್ತದೆ. ಇದರಿಂದ ವೈಜ್ಞಾನಿಕ ಚಿಂತನೆ ಮತ್ತು ವೈಚಾರಿಕ ಸಾಮರ್ಥ್ಯ ಲಭಿಸುತ್ತದೆ. ಆಗ ಮೌಢ್ಯತೆಗಳು, ಕಂದಾಚಾರಗಳು, ಮೂಢನಂಬಿಕೆಗಳ ಹಿಂದೆ ಇರುವ ತರ್ಕ ಅರ್ಥವಾಗಿ ಮೋಸ ಹೋಗುವುದು ತಪ್ಪುತ್ತದೆ. ಎಂದರು.ಪ.ಪಂ.ಸದಸ್ಯ ಸೈಯದ್‌ಅನ್ವರ್ ಮಾತನಾಡಿ,ಸರ್ಕಾರಿ ಶಾಲೆಯಲ್ಲಿ ಕಲಿಯುತ್ತಿರುವ ಮಕ್ಕಳು ಶಿಕ್ಷಕರ ಮಾರ್ಗದರ್ಶನದಲ್ಲಿ ಕಣ್ಮನ ಸೆಳೆಯುವ ವಿಜ್ಞಾನ ಮಾದರಿಗಳನ್ನು ತಯಾರಿಸಿ ಪ್ರದರ್ಶನ ನೀಡುತ್ತಿರುವುದು ತುಂಬಾ ಸಂತಸದ ಸಂಗತಿಯಾಗಿದೆ. ವಿಜ್ಞಾನ ಅಧ್ಯಯನ ಕ್ರಮಬದ್ಧ ಮತ್ತು ಶಿಸ್ತು ಕಲಿಕೆಗೆ ಪೂರಕವಾಗಿರುತ್ತದೆ ಎಂದರು.ಎಸ್‌ಡಿಎಂಸಿ ಅಧ್ಯಕ್ಷೆ ಪಿ.ಎ.ಸುಮಲತಾ, ಸದಸ್ಯರಾದ ವಾಣಿ, ಸುಮಯ್ಯ, ನಾಗವೇಣಿ, ಎಸ್‌ಟಿಎಆರ್ ವಿದ್ಯಾಸಂಸ್ಥೆ ಉಪಪ್ರಾಚಾರ್ಯ ಬಿ.ಆರ್.ರಮೇಶ್, ಪಣೀಂದ್ರಕುಮಾರ್, ಮುಖ್ಯಶಿಕ್ಷಕಿ ಎನ್.ಇಂದಿರಮ್ಮ, ಶಿಕ್ಷಕರಾದ ಎಂ.ವಿ.ಯತೀಶ್‌ಕುಮಾರ್, ಎಚ್.ಪಿ.ಮಂಜುಳಮ್ಮ, ಎನ್.ಸುಮಿತ್ರಮ್ಮ, ಜಿ.ಗಾಯಿತ್ರಿದೇವಿ, ಕೆ.ಎಲ್.ಉಷಾ, ಬಿ,ಕೃಷ್ಣಾರೆಡ್ಡಿ, ಬಿ.ಸುಮಾ, ಡಿ.ರಾಮಕೃಷ್ಣ, ಹೆಚ್.ಮಂಜುನಾಥ ಉಪಸ್ಥಿತರಿದ್ದರು.

## ಚಿತ್ರದುರ್ಗದವರನ್ನೇ ಎಂಎಲ್‌ಸಿ ಮಾಡಲು ತಮ್ಮ ಸಹಕಾರ ಅತ್ಯಗತ್ಯವಾಗಿ ಬೇಕು-ಸ್ವಾಮೀಜಿ



» ಹೊಸದುರ್ಗ

ಕಾಡುಗೊಲ್ಲರು ಕರ್ನಾಟಕದಲ್ಲಿ ಸುಮಾರು 10 ಲಕ್ಷ ಜನಸಂಖ್ಯೆಯನ್ನು ಹೊಂದಿದ್ದು ಅವರಲ್ಲಿ ಕೆಲವರು ರಾಜಕೀಯ ಮುಖಂಡರುಗಳು ಎಂ.ಎಲ್.ಸಿ ಯನ್ನು ಹೊಂದಲು ಅರ್ಹರಿದ್ದಾರೆ. ಆದ್ದರಿಂದ ಚಿತ್ರದುರ್ಗದವರನ್ನೇ ಎಂ.ಎಲ್.ಸಿ.ಯನ್ನಾಗಿ ಮಾಡಲು ತಮ್ಮ ಸಹಕಾರ ಅತ್ಯಗತ್ಯವಾಗಿ ಬೇಕು ಎಂದು ವನಕಲ್ಲು ಮಲ್ಲೇಶ್ವರ ಮಹಾಸಂಸ್ಥಾನ ಸುಕ್ಷೇತ್ರ ಮಠದ ಶ್ರೀ ಬಸವ ರಮಾನಂದ ಸ್ವಾಮೀಜಿ ಶಾಸಕ ಬಿ.ಜಿ.ಗೋವಿಂದಪ್ಪನವರಲ್ಲಿ ಮನವಿ ಮಾಡಿಕೊಂಡರು.

ಪಟ್ಟಣದ ಪ್ರವಾಸಿ ಮಂದಿರದಲ್ಲಿ ಶಾಸಕ ಬಿ.ಜಿ.ಗೋವಿಂದಪ್ಪ ಅವರನ್ನ ಸನ್ಮಾನಿಸಿ ಮನವಿ ಪತ್ರ ನೀಡಿ ನಂತರ ಮಾತನಾಡಿದರು.

ಈ ಹಿಂದೆಯೂ ತಾವು ಒಬ್ಬ ಎಂಎಲ್ಸಿಯನ್ನು ನಿಮ್ಮ ಸಮಾಜಕ್ಕೆ ಕೊಡುತ್ತೇವೆಂದು ಹೇಳಿದ್ದೀರಿ ಅದರಂತೆ ಒಬ್ಬ ಎಂಎಲ್ಸಿಯನ್ನು ಸಮಾಜದ ವತಿಯಿಂದ ಮಾಡಬೇಕೆಂದರು. ಅದಕ್ಕೆ ಪ್ರತಿಕ್ರಿಯಿಸಿದ ಶಾಸಕರು ನೋಡೋಣ ಎಂದು ಸಮ್ಮತಿಸಿದರು. ಹಾಗೆ ಅಲೆಮಾರಿ ಪಟ್ಟಿಯಲ್ಲಿ ಗೊಲ್ಲ ಎಂಬ ನಮೂದು ಈಗಾಗಲೇ ಇದ್ದು, ಆ ಪಟ್ಟಿಯಲ್ಲಿ ಕಾಡುಗೊಲ್ಲ ಎಂಬ ಹೆಸರನ್ನು ಸೇರಿಸಿ ಕಾಡುಗೊಲ್ಲರ ಶೈಕ್ಷಣಿಕ ಸಾಮಾಜಿಕ ಹಾಗೂ ಆರ್ಥಿಕ ಸ್ಥಿತಿಗತಿಗಳನ್ನು ಸುಧಾರಿಸುವಂತೆ ಮಾಡಬೇಕೆಂದು ಒತ್ತಾಯಿಸಿದರು. ಈ ಸಂದರ್ಭದಲ್ಲಿ ಬ್ಲಾಕ್ ಕಾಂಗ್ರೆ ಅಧ್ಯಕ್ಷ ಪದ್ಮನಾಭ ಕಾಡುಗೊಲ್ಲರ ಸಂಘದ ಅಧ್ಯಕ್ಷ ರವೀಂದ್ರ ಗೌರವಾಧ್ಯಕ್ಷ ಸಿ. ರಾಮಪ್ಪ ಉಪಾಧ್ಯಕ್ಷ ರಾಮಲಿಂಗಪ್ಪ ಹಾಗೂ ಸಾಹಿತಿ ಧನಂಜಯ ಮೆಂಗಸಂದ್ರ,ಯಶವಂತ್ ಗೌಡ ಮುಂತಾದವರು ಹಾಜರಿದ್ದರು.

ಪ್ರಮುಖ ಸುದ್ದಿ

# ದಿವ್ಯಾಂಗರಿಗೆ ಸರ್ಕಾರದಿಂದ ಸೂಕ್ತ ಅವಕಾಶ: ಡಿಸಿ

» ದಾವಣಗೆರೆ

ದಿವ್ಯಾಂಗರಿಗೆ ತಮ್ಮ ಜೀವನದಲ್ಲಿ ಶಕ್ತಿ ಮತ್ತು ಧೈರ್ಯವನ್ನು ಹೊಂದಿ ಆತ್ಮವಿಶ್ವಾಸದಿಂದ ಬದುಕಲು ಸರ್ಕಾರ ಎಲ್ಲ ರೀತಿಯ ಅವಕಾಶಗಳನ್ನು ಕಲ್ಪಿಸಿದೆ. ದಿವ್ಯಾಂಗರು ಸಾಮಾನ್ಯ ಜನರಂತೆ ಬದುಕು ನಡೆಸಬೇಕು ಎಂದು ಜಿಲ್ಲಾಧಿಕಾರಿ ಗಂಗಾಧರಸ್ವಾಮಿ.ಜಿ.ಎಂ ಹೇಳಿದರು.

ಸೋಮವಾರ(ಫೆ.24)ರಂದು ದಿವ್ಯಾಂಗರ ಕೌಶಾಲ್ಯಾಭಿವೃದ್ಧಿ ಪುನರ್ವಸತಿ ಮತ್ತು ಸಬಲೀಕರಣದ ಸಂಯುಕ್ತ ಪ್ರಾದೇಶಿಕ ಕೇಂದ್ರದ ವತಿಯಿಂದ, ನಗರದ ಪ್ರಾದೇಶಿಕ ಕೇಂದ್ರದಲ್ಲಿ ಅಂಗನವಾಡಿ ಶಿಕ್ಷಕರಿಗಾಗಿ ಪೂರ್ವಭಾವಿ ಮಧ್ಯಸ್ಥಿಕೆ ಅರಿವು ಮೂಡಿಸುವ ಕಾರ್ಯಕ್ರಮ ಉದ್ಘಾಟಿಸಿ, ಕಿಟ್‌ಗಳ ವಿತರಿಸಿ ಅವರು ಮಾತನಾಡಿದರು.

ಸಿಆರ್‌ಸಿ ಸರ್ಕಾರದಿಂದ ಸ್ಥಾಪಿಸಲ್ಪಟ್ಟ ಪ್ರತಿಷ್ಠಿತ ಸಂಸ್ಥೆಯಾಗಿದೆ. ದಿವ್ಯಾಂಗ ವ್ಯಕ್ತಿಗಳ ಕಲ್ಯಾಣಕ್ಕಾಗಿ ಭಾರತ ಸರ್ಕಾರದ ವತಿಯಿಂದ ಸ್ಥಾಪಿಸಲ್ಪಟ್ಟ ಸಿಆರ್‌ಸಿ, 21 ವಿಧದ ದಿವ್ಯಾಂಗರ ಮತ್ತು ಜನರ ಅಗತ್ಯತೆಗಳನ್ನು ನೋಡಿಕೊಳ್ಳುತ್ತಿದೆ. ಅಂಗವಾಡಿ ಶಿಕ್ಷಕರಾಗಿರುವ ನೀವು ಪ್ರಸವಪೂರ್ವ ಮತ್ತು ನಂತರದ ಆರೈಕೆಗಾಗಿ ನಿಕಟವಾಗಿ ಕೆಲಸ ಮಾಡುತ್ತಿದ್ದೀರಿ. ಸಮಾಜದ ಜನರಲ್ಲಿ ಸಂವಹನ ಮಾಡುವುದು ನಿಮ್ಮ ಕರ್ತವ್ಯ.





ನಿಮ್ಮ ವ್ಯಾಪ್ತಿಯಲ್ಲಿನ ಪ್ರತಿಯೊಬ್ಬ ನಾಗರಿಕರ ಸ್ಥಿತಿಯ ಬಗ್ಗೆ ನಿಮಗೆ ಚೆನ್ನಾಗಿ ತಿಳಿದಿದೆ. ಮಕ್ಕಳು ಯಾವುದೇ ರೀತಿಯ ದಿವ್ಯಾಂಗತೆಗೆ ಸಂಬಂಧಿತ ಸಮಸ್ಯೆಗಳಿಂದ ಬಳಲುತ್ತಿದ್ದರೆ, ಸಹಾಯದ ಅಗತ್ಯವಿರುವ ಹಿರಿಯ ನಾಗರಿಕರು ಸೂಕ್ತ ಸಹಾಯ ಹಾಗೂ ಪ್ರಯೋಜನ ಪಡೆಯಲು ಸಿಆರ್‌ಸಿಗೆ ಭೇಟಿ ನೀಡುವಂತೆ ಅವರಿಗೆ ತಿಳಿಸಬೇಕು.

ಸಿಆರ್‌ಸಿ ಎಲ್ಲಾ ರೀತಿಯ ದಿವ್ಯಾಂಗತೆಗೆ ಸಂಬಂಧಿತ ಸಮಸ್ಯೆಗಳಲ್ಲಿ ಉತ್ತಮ ಪರಿಣತಿ ಹೊಂದಿರುವ ಸಿಬ್ಬಂದಿಯನ್ನು ಹೊಂದಿದೆ. ನೀವು ಮಗುವಿನ ಚಿಕ್ಕ ವಯಸ್ಸಿನಲ್ಲಿ ಯಾವುದೇ ಅಂಗವೈಕಲ್ಯವನ್ನು ಗುರುತಿಸಿದರೆ, ಅದನ್ನು ಗುಣಪಡಿಸಬಹುದು ಮತ್ತು ಸಿಆರ್‌ಸಿಯು ಅವರನ್ನು ಸಾಮಾನ್ಯ ಸ್ಥಿತಿಗೆ ತರಲು ಶ್ರಮಿಸುತ್ತದೆ ಎಂದು ತಿಳಿಸಿದರು.

ಇದೇ ವೇಳೆ ಅವರು ಅಂಗನವಾಡಿ ಶಿಕ್ಷಕರಿಗೆ ಆರಂಭಿಕ ಮಧ್ಯಸ್ಥಿಕೆ ಜಾಗೃತಿ ಮೂಡಿಸುವ ಕಿಟ್‌ಗಳ ವಿತರಣೆ ಹಾಗೂ ವಿವಿಧ ದಿವ್ಯಾಂಗರಿಗೆ 120 ಸಹಾಯಕ ಸಾಧನಗಳನ್ನು ವಿತರಿಸಿದರು. ಈ ಕಾರ್ಯಕ್ರಮದಲ್ಲಿ 70 ಕ್ಕೂ ಹೆಚ್ಚಿನ ಫಲಾನುಭವಿಗಳು ವಿವಿಧ ಬಗೆಯ ಸಹಾಯಕ ಸಾಧನಗಳನ್ನು ಪಡೆದುಕೊಂಡರು. ನಂತರ ಸಿಆರ್‌ಸಿಯಿಂದ ದಿವ್ಯಾಂಗರಿಗೆ ನೀಡಲಾಗುವ ಸವಲತ್ತುಗಳು ಸೇವೆಗಳನ್ನು ವಿತರಿಸಿದರು. ವಿದ್ಯಾರ್ಥಿಗಳೊಂದಿಗೆ ಜಿಲ್ಲಾಧಿಕಾರಿಸಂವಾದನಡೆಸಿದರು.ಇಂತಹ ವೃತ್ತಿಯನ್ನು ಆಯ್ಕೆ ಮಾಡಿಕೊಂಡಿದ್ದಕ್ಕಾಗಿ ಮತ್ತು ದಿವ್ಯಾಂಗರಿಗೆ ಸೇವೆ ಸಲ್ಲಿಸುವುದು ಉದಾತ್ತ ಕೆಲಸ ಎಂದು ಸಿಬ್ಬಂದಿಗೆ ಶ್ಲಾಘಿಸಿದರು.

ಸಿಆರ್‌ಸಿ ನಿರ್ದೇಶಕಿ ಮೀನಾಕ್ಷಿ ಮಾತನಾಡಿ, ಬಿಪಿಎಲ್ ವರ್ಗದವರಿಗೆ ಮತ್ತು ಹಿರಿಯ ನಾಗರಿಕರಿಗೆ ವಿಕಲಚೇತನರಿಗೆ ಅಗತ್ಯವಿರುವ ಎಲ್ಲಾ ಸಹಾಯ ಮತ್ತು ಉಪಕರಣಗಳನ್ನು ಉಚಿತವಾಗಿ ನೀಡಲಾಗುತ್ತದೆ. 21 ವಿಧದ ದಿವ್ಯಾಂಗರಿಗೆ, ಪುನರ್ವಸತಿ, ಸಮಾಲೋಚನೆ, ಚಿಕಿತ್ಸೆ, ಉದ್ಯೋಗ ಕೌಶಲ್ಯಗಳ ತರಬೇತಿ, ಉದ್ಯೋಗ ಇತ್ಯಾದಿಗಳಿಗೆ ಸೇವೆ ಸಲ್ಲಿಸುತ್ತಾ ಇದ್ದಾರೆ. ಕರ್ನಾಟಕ ರಾಜ್ಯದ ಎಲ್ಲಾ ಜನರು ಸಿಆರ್‌ಸಿಯಿಂದ ಒದಗಿಸಲಾದ ಸೌಲಭ್ಯಗಳನ್ನು ಗರಿಷ್ಠವಾಗಿ ಬಳಸಿಕೊಳ್ಳುವಂತೆ ಅವರು ವಿನಂತಿಸಿದರು.

ಸಿಆರ್‌ಸಿ ಆಡಳಿತಾಧಿಕಾರಿ ವೈ.ಶ್ರೀನಾಥ್, 275 ಜನ ಅಂಗನವಾಡಿ ಶಿಕ್ಷಕರು, ವಿಕಲಚೇತನರು ಅವರ ಬಂಧುಗಳು, ಸಿಆರ್‌ಸಿ, ಸಿಬ್ಬಂದಿ ಹಾಗೂ ವಿದ್ಯಾರ್ಥಿಗಳು ಸೇರಿದಂತೆ ಸುಮಾರು 500 ಜನ ಭಾಗವಹಿಸಿದ್ದರು.

## ಫಾಸ್ಟ್ ನ್ಯೂಸ್

### ಚಿತ್ರದುರ್ಗ ತಹಶೀಲ್ದಾರ್ ನಾಗವೇಣಿ ವರ್ಗಾವಣೆ

» ಚಿತ್ರದುರ್ಗ

ತಹಶೀಲ್ದಾರ್ ಡಾ.ನಾಗವೇಣಿರವರನ್ನು ರಾಜ್ಯ ಸರ್ಕಾರ ದಿಢೀರ್ ವರ್ಗಾವಣೆಗೊಳಿಸಿ ಆದೇಶಿಸಿದೆ. ಎರಡು ವರ್ಷಗಳಿಂದ ಕರ್ತವ್ಯ ನಿರ್ವಹಿಸುತ್ತಿದ್ದ ಡಾ.ನಾಗವೇಣಿರವರನ್ನು ವರ್ಗಾಯಿಸಿರುವ ರಾಜ್ಯ ಸರ್ಕಾರ ಹಾಸನದ ಗೋವಿಂದರಾಜುರವರನ್ನು ಚಿತ್ರದುರ್ಗ ತಹಶೀಲ್ದಾರ್ ಆಗಿ ನೇಮಿಸಿದೆ.

### ವ್ಯಕ್ತಿ ಕಾಣೆ

» ದಾವಣಗೆರೆ

ಹರಿಹರ ಗ್ರಾಮಾಂತರ ಪೊಲೀಸ್ ಠಾಣೆಯ ವ್ಯಾಪ್ತಿಯ ಬೆಳ್ಳೂಡಿ ಗ್ರಾಮದ ಪರಮೇಶ್ವರಚಾರಿ ತಂದೆ ಲೇ.ಈಶ್ವರಾಚಾರಿ 69 ವರ್ಷ, ಆಚಾರ್ಯ ಜನಾಂಗದವರು ಇವರು ಕಳೆದ 22 ನವಂಬರ್ 2023 ಮಧ್ಯಾಹ್ನ 12.30ಕ್ಕೆ ಮನೆಯಿಂದ ಹೋದವರು ವಾಪಾಸ್ ಮನೆಗೆ ಬಂದಿರುವುದಿಲ್ಲ. ಎಂದು ಪೊಲೀಸ್ ಠಾಣೆಯ ಆರಕ್ಷಕ ಉಪನಿರೀಕ್ಷಕರು ತಿಳಿಸಿದ್ದಾರೆ.

### ತೋಟಗಾರಿಕೆ ತರಬೇತಿ

» ದಾವಣಗೆರೆ

ಪ್ರಸಕ್ತ ಸಾಲಿನ ಚಿತ್ರದುರ್ಗ ಜಿಲ್ಲೆಯ ಐಯ್ಯನಹಳ್ಳಿ, ತೋಟಗಾರಿಕೆ ತರಬೇತಿ ಕೇಂದ್ರದಲ್ಲಿ 10 ತಿಂಗಳ ತೋಟಗಾರಿಕೆ ತರಬೇತಿಯನ್ನು ಪಡೆಯಲು ಅರ್ಜಿ ಆಹ್ವಾನಿಸಲಾಗಿದೆ.ಅರ್ಜಿಗಳನ್ನು ಜಿಲ್ಲೆಯ ತೋಟಗಾರಿಕೆ ಉಪನಿರ್ದೇಶಕರ ಕಚೇರಿ, ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರು, ರಾಜ್ಯವಲಯ, ದಾವಣಗೆರೆ ಕಚೇರಿಯಲ್ಲಿ ಮಾರ್ಚ್ 31 ರವರೆಗೆ ಪಡೆದು ಏಪ್ರಿಲ್ 1 ರಂದು ಕಚೇರಿಗೆ ಸಲ್ಲಿಸಬೇಕೆಂದು ತೋಟಗಾರಿಕೆ ಉಪನಿರ್ದೇಶಕರು ತಿಳಿಸಿದ್ದಾರೆ.

### ಪ್ರಜಾಪಿತ ಬ್ರಹ್ಮಕುಮಾರಿ ಈಶ್ವರಿಯ ವಿವಿ ಶಿವರಾತ್ರಿ ಉತ್ಸವ



» ಚಳ್ಳಕೆರೆ

ನಗರದ ಪ್ರಜಾಪಿತಬ್ರಹ್ಮಕುಮಾರಿ ಈಶ್ವರಿಯವಿಶ್ವವಿದ್ಯಾಲಯ ಈ ಭಾರಿ ಮಹಾಶಿವರಾತ್ರಿ ಹಬ್ಬವನ್ನು ರೈತ ಸಮುದಾಯದ ಅಭ್ಯುದಯಕ್ಕಾಗಿ ಶಿವನನ್ನು ಪ್ರಾರ್ಥಿಸುವ ಹಬ್ಬವನ್ನಾಗಿ ಪರಿವರ್ತಿಸಿದೆ. ಮಂಗಳವಾರ ಸಂಜೆ ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಾರ್ಯಾಲಯದ ಆವರಣದಲ್ಲಿ ಈಶ್ವರ ದರ್ಶನ ಹಾಗೂ ಶಿವರಾತ್ರಿ ಹಬ್ಬ ವಿಶೇಷತೆ ಕುರಿತು ಕಾರ್ಯಕ್ರಮವನ್ನು ಹಮ್ಮಿಕೊಂಡಿದ್ದರು. ಕೃಷಿ ಇಲಾಖೆಯ ಜಿಲ್ಲಾ ಜಂಟಿ ನಿರ್ದೇಶಕ ಬಿ.ಮಂಜುನಾಥ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿ, ಶಿವರಾತ್ರಿ ಹಬ್ಬದಂದು ಎಲ್ಲರೂ ಶಿವನನ್ನು ಪೂಜಿಸುವ ಕಾರ್ಯವನ್ನು ಮಾಡುವ ಮೂಲಕ ಶಿವನ ಅನುಗ್ರಹವನ್ನು ಪಡೆಯುತ್ತಾರೆ.ಆದರೆ,ಇಂದಿನಈಕಾರ್ಯಕ್ರಮದಲ್ಲಿ ವಿಭಿನ್ನ ಎನ್ನುವಂತೆ ದೇಶದ ಅನ್ನದಾತ ರೈತರನ್ನು ಅಭಿನಂದಿಸುವ ಮತ್ತು ಅವರ ಕಾಯಕವನ್ನು ಗೌರವಿಸುವ ಕಾರ್ಯಕ್ರಮವನ್ನು ರೈತ ಸಶಕ್ತಿಕರಣ ಉತ್ಸವವಾಗಿ ಹಮ್ಮಿಕೊಂಡಿರುವ ಸಂತಸ ತಂದಿದೆ ಎಂದರು. ಪ್ರಾರಂಭದಲ್ಲಿ ಪ್ರಾಸ್ತಾವಿಕವಾಗಿ ಮಾತನಾಡಿದ ಬ್ರಹ್ಮಕುಮಾರಿ ಈಶ್ವರಿವಿದ್ಯಾಲಯದ ಸಂಚಾಲಕಿ ಬಿ.ಕೆ.ವಿಮಲಕ್ಕ, ಇಂದಿನ ಈ ಕಾರ್ಯಕ್ರಮವನ್ನು ಶಾಸಕರು ಉದ್ಘಾಟಿಸಬೇಕಿತ್ತು. ಅನಿವಾರ್ಯ ಕಾರಣಗಳಿಂದ ಅವರು ಕಾರ್ಯಕ್ರಮಕ್ಕೆ ಆಗಮಿಸದೆ ಶುಭಕೋರಿದ್ದಾರೆ. ಪ್ರತಿವರ್ಷ ಎಲ್ಲರ ಸಹಕಾರದಿಂದ ಮೂರು ದಿನಗಳ ಕಾಲ ಶಿವನಾಮಸ್ಮರಣೆ ಕಾರ್ಯಕ್ರಮ ನಡೆಯುತ್ತದೆ. ವಿಶೇಷವಾಗಿ ಜ್ಯೋತಿರ್ಲಿಂಗ ದರ್ಶನ ಪ್ರಮುಖವಾಗಿದೆ. ಸಾವಿರಾರು ಭಕ್ತರು ಜ್ಯೋತಿರ್ಲಿಂಗ ದರ್ಶನ ಮಾಡುತ್ತಾರೆ. ಶಿವರಾತ್ರಿ ಉತ್ಸವ ಎಲ್ಲರಿಗೂ ಸಂತಸವನ್ನುಂಟು ಮಾಡಲಿದೆ ಎಂಬ ಭಾವನೆ ನಮ್ಮದು. ಕಾರ್ಯಕ್ರಮದಲ್ಲಿ ತೋಟಗಾರಿಕೆ ಅಧಿಕಾರಿ ವಿರೂಪಾಕ್ಷಪ್ಪ, ಸಹಾಯಕ ಕೃಷಿ ಅಧಿಕಾರಿ ಜೆ.ಅಶೋಕ್, ವಿಶ್ರಾಂತ ಪ್ರಾಂಶುಪಾಲಡಾ.ಸಿ.ಶಿವಲಿಂಗಪ್ಪ,ರಾಮಚಂದ್ರರೆಡ್ಡಿ ಬಡಗಿರಂಗಣ್ಣ, ಪ್ರಜಾಪಿತಬ್ರಹ್ಮಕುಮಾರಿ ಈಶ್ವರಿಯ ವಿಶ್ವವಿದ್ಯಾಲಯದ ಮುಖಂಡರಾದ ಎಂ.ಎಸ್. ರಾಧ, ಓಂಕಾರಮ್ಮ, ಲಲಿತಮ್ಮ, ಚೂಡಾಮಣಿ ಮುಂತಾದವರು ಇದ್ದರು.

### ಮುರುಘಾಮಠದಲ್ಲಿ ಶಿವರಾತ್ರಿ

» ಚಿತ್ರದುರ್ಗ

ನಗರದ ಶ್ರೀ ಜಗದ್ಗುರು ಮುರುಘರಾಜೇಂದ್ರ ಬೃಹನ್ಮಠದಲ್ಲಿ ಇದೇ 26ರ ಬುಧವಾರ ರಾತ್ರಿ 8 ಗಂಟೆಯಿಂದ 12 ಗಂಟೆಯವರೆಗೆ ಶಿವರಾತ್ರಿಪ್ರಯುಕ್ತ ಮುರುಗಿಯ ಶಾಂತವೀರ ಮುರುಘರಾಜೇಂದ್ರ ಮಹಾಸ್ವಾಮಿಗಳವರ ಕರ್ತೃವಿನ ಗದ್ದುಗೆಯಲ್ಲಿ ವಚನಾಭಿಷೇಕ, ಸಹಜ ಶಿವಯೋಗ, ವಚನ ಸಂಗೀತ, ಭಜನೆ ಕಾರ್ಯಕ್ರಮ ಅದರೊಂದಿಗೆ ಪ್ರಸಾದದ ವ್ಯವಸ್ಥೆಯನ್ನೂ ಏರ್ಪಡಿಸಲಾಗಿದೆ.

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T